ಸಂಪುಟ: 01 ಸಂಚಿಕೆ: 54 ಪುಟ: 04 ಬೆಲೆ: 02 ಮಂಗಳವಾರ ಆಗಸ್ಟ್ 04 2026 ಮೊ: 7411699198/7406928404

# ಅಜಾತ ಶತ್ರು

ಜನರ ನುಡಿ.... ಕೊಪ್ಪಳದಿಂದ ಏಕಕಾಲಕ್ಕೆ ಪ್ರಕಟ ಸತ್ಯದ ಧ್ವನಿ...

ಕನ್ನಡ ದಿನ ಪತ್ರಿಕೆ

ಪ್ರದೀಪಕುಮಾರ
ಸಂಪಾದಕರು




Volume:01 Issue: 54 Pages:04 Price:02 TUESDAY AUGUST 04 2026 RNI NO: KNKAN/26/A4008 E-mail:ajathashathru2026@gmail.com

## ತಂಗಡಗಿ, ರಾಯರೆಡ್ಡಿಗೆ ಸಚಿವ ಸ್ಥಾನ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ತೀವ್ರ ಕುತೂಹಲ ಕೆರಳಿಸಿದ್ದ ಸಚಿವ ಸಂಪುಟ ವಿಸ್ತರಣೆ ಮಾಡಲಾಗಿದೆ. ಸಂಪುಟ ವಿಸ್ತರಣೆ ವೇಳೆ ಕೊಪ್ಪಳ ಜಿಲ್ಲೆಗೆ ಎರಡು ಸಚಿವ ಸ್ಥಾನ ನೀಡುವ ಮೂಲಕ ಬಂಪರ್ ಕೊಡುಗೆ ನೀಡಿದೆ. ಕನಕಗಿರಿ ಶಾಸಕ ಶಿವರಾಜ್ ತಂಗಡಗಿ ಹಾಗೂ ಬಸವರಾಜ ರಾಯರೆಡ್ಡಿ ಇಬ್ಬರು ಡಿ.ಕೆ ಶಿವಕುಮಾರ್ ಸಂಪುಟದಲ್ಲಿ ಸ್ಥಾನ ಪಡೆದಿದ್ದಾರೆ.**




ಈ ಮೂಲಕ ಸಚಿವ ಸ್ಥಾನದ ಆಕಾಂಕ್ಷಿ ಶಾಸಕ ರಾಘವೇಂದ್ರ ಹಿಟ್ನಾಳ್ ಗೆ ನಿರಾಸೆ ಮೂಡಿಸಿದೆ. ಇದೇ ಮೊದಲ ಬಾರಿಗೆ ಸಚಿವ ಶಿವರಾಜ್ ತಂಗಡಗಿ ಒಂದೇ ಅವಧಿಯಲ್ಲಿ ಇಬ್ಬರು ಮುಖ್ಯಮಂತ್ರಿಗಳ ಸಂಪುಟದಲ್ಲಿ ಸ್ಥಾನ ಗಿಟ್ಟಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ

# ದಾಖಲೆಯ 4ನೇ ಬಾರಿಗೆ ಸಚಿವರಾಗಿ

## ಪ್ರಮಾಣ ವಚನ ಸ್ವೀಕರಿಸಿದ ಶಿವರಾಜ ತಂಗಡಗಿ

**ಕೊಪ್ಪಳ: ಕನಕಗಿರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶಿವರಾಜ್ ಎಸ್ ತಂಗಡಗಿ ಅವರು ಆಗಸ್ಟ್ 3ರಂದು ಸಚಿವರಾಗಿ ಪ್ರಮಾಣ ವಚನ ಸ್ವೀಕ–ರಿಸಿದರು. ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರ ನೂತನ ಸಚಿವ ಸಂಪುಟಕ್ಕೆ ಸೇರ್ಪಡೆಯಾಗುವ ಮೂಲಕ 4ನೇ ಬಾರಿಗೆ ಸಚಿವರಾದ ದಾಖಲೆ ಬರೆದರು.**

ಬೆಂಗಳೂರಿನ ಲೋಕಭವನ ಆವರಣದಲ್ಲಿನ ಗಾಜಿನಮನೆಯಲ್ಲಿ ಆಗಸ್ಟ್ 3ರಂದು ಸಂಜೆ ನಡೆದ ಸಚಿವರ ಪದಗ್ರಹಣ ಸಮಾರಂಭದಲ್ಲಿ ರಾಜ್ಯಪಾಲರಾದ ಥಾವರ್ ಚೆಂದ್ ಗೆಹ್ಲೋಟ್ ಅವರು ಶಾಸಕರಿಗೆ ಪ್ರಮಾಣ ವಚನ ಬೋಧಿಸಿದರು. ಶಿವರಾಜ ತಂಗಡಗಿ ಅವರು ಈ ಹಿಂದೆ 2008, 2013 ಮತ್ತು 2023ರಲ್ಲಿ ಸಚಿವರಾಗಿದ್ದ ವೇಳೆಯಲ್ಲಿ ಕೃಷಿ ಮಾರುಕಟ್ಟೆ ಇಲಾಖೆ, ಸಣ್ಣ ನೀರಾವರಿ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ



ಇಲಾಖೆಯ ಸಚಿವರಾಗಿ ಕಾರ್ಯ ನಿರ್ವಹಿಸಿದ್ದಾರೆ. ಹಿನ್ನೆಲೆ: 10–06–1971ರಲ್ಲಿ ಬಾಗಲಕೋಟೆ ಜಿಲ್ಲೆಯ ಇಳಕಲ್ ತಾಲೂಕಿನಲ್ಲಿ ಜನಿಸಿರುವ ಶಿವರಾಜ ತಂಗಡಗಿ ಅವರು ಪ್ರಾಥಮಿಕ, ಪ್ರೌಢ ಹಾಗೂ ಪಿಯು ಮತ್ತು ಪದವಿ ಶಿಕ್ಷಣವನ್ನು ಇಳಕಲ್‌ನಲ್ಲಿ ಪೂರೈಸಿದ್ದಾರೆ.

ಕಾಲೇಜು ದಿನಗಳಲ್ಲೇ ನಾಯಕತ್ವ ಗುಣಗಳನ್ನು ಹೊಂದಿ 25ನೇ ವಯಸ್ಸಿಗೆ ರಾಜ–ಕೀಯ ಪ್ರವೇಶ ಮಾಡಿದರು. ಜನನಾಯಕರಾಗಿ ಮೊದಲಿಗೆ ಇಳಕಲ್ ಪುರಸಭೆಗೆ ಅವಿರೋಧವಾಗಿ ಆಯ್ಕೆಯಾದರು. ಮುಂದೆ ಕನಕಗಿರಿ ಮೀಸಲು ವಿಧಾನಸಭಾ ಕ್ಷೇತ್ರದಲ್ಲಿ ಶಾಸಕ ಸ್ಥಾನಕ್ಕೆ ಸ್ಪರ್ಧಿಸಿ ಗೆಲುವಿನ ನಗೆ ಬೀರಿದರು. ಅದೇ ವೇಳೆ ಕ್ಯಾಬಿನೆಟ್ ಸಚಿವರಾದರು. ಮುಂದೆ 2013ರಲ್ಲಿ ಹಾಗೂ 2023ರಲ್ಲಿ ಸಹ ವಿಧಾನಸಭೆ ಪ್ರವೇಶಿಸಿ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ.



ಕೊಪ್ಪಳ ಕ್ಷೇತ್ರದ ಶಾಸಕ ರಾಘವೇಂದ್ರ ಸಚಿವ ಸ್ಥಾನ ಸಿಗದಿದ್ದಕ್ಕೆ ಅವರ ಬೆಂಬಲಿಗರು ಟೈಯರಗೆ ಬೆಂಕಿ ಹಚ್ಚಿ ನಗರದ ಅಶೋಕ್ ಸರ್ಕಲ್ ನಲ್ಲಿ ಸರ್ಕಾರದ ವಿರುದ್ಧ ಆಕಾಶ ವ್ಯಕ್ತಪಡಿಸಿದರು.

## ತಿಪ್ಪರಸನಾಳ ಮೊರಾರ್ಜಿ ವಸತಿ ನಿಲಯದಲ್ಲಿ ಶ್ರೀ ಮಂಜುನಾಥ ಟ್ರಸ್ಟ್‌ನಿಂದ 500 ಉಚಿತ ಗಿಡಗಳ ನೆಡುವ ಕಾರ್ಯಕ್ರಮ



ಅ.ಶ. ಸುದ್ದಿ ಕುಕನೂರು

**ಕುಕನೂರು: ಕುಕನೂರು ತಾಲ್ಲೂಕಿನ ತಿಪ್ಪರಸನಾಳ ಗ್ರಾಮದ ಅಲ್ಪಸಂಖ್ಯಾತರ ಮೊರಾರ್ಜಿ ವಸತಿ ನಿಲಯದಲ್ಲಿ ಸೋಮವಾರ ಶ್ರೀ ಮಂಜುನಾಥ ಟ್ರಸ್ಟ್ ಕಮಿಟಿಯ ವತಿಯಿಂದ ಪರಿಸರ ಸಂರಕ್ಷಣೆಯ ಉದ್ದೇಶದಿಂದ 500 ಉಚಿತ ಗಿಡಗಳನ್ನು ನೆಟ್ಟು, ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.**

ಕಾರ್ಯಕ್ರಮದಲ್ಲಿ ವಸತಿ ನಿಲಯದ ಪ್ರಾಂಶುಪಾಲರು,ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿ, ಗಿಡಗಳನ್ನು ಸಂರಕ್ಷಿಸುವ ಸಂಕಲ್ಪ ಮಾಡಿದರು. ಈ ವೇಳೆ ಶ್ರೀ ಮಂಜುನಾಥ ಟ್ರಸ್ಟ್ ಕಮಿಟಿಯ ಶ್ರೀಶೈಲ , ವಕೀಲ ರಫಿ ಸಾಬ್ ಬಳಗೇರಿ, ಲಕ್ಷ್ಮಣ ಕಾಳಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಗಿಡ ನೆಡುವುದರಿಂದ ಪರಿಸರ ಸಂರಕ್ಷಣೆ, ಹಸಿರು ವಾತಾವರಣ ನಿರ್ಮಾಣ ಹಾಗೂ ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ಉಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಕಾರ್ಯಕ್ರಮದಲ್ಲಿ ಮಾತನಾಡಿದ ಗಣ್ಯರು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು ಗಿಡಗಳಿಗೆ ನೀರೆರೆದು ಪರಿಸರ ಜಾಗೃತಿಯ ಸಂದೇಶ ಸಾರಿದರು.

**ವರದಿಗಾರರು: ಚನ್ನಯ್ಯ ಹಿರೇಮಠ, ಕುಕನೂರು**

## ಸತ್ಯವಾಣಿ ಕಟೋಕ್ತಿ

ಸಜ್ಜನರ ಸಂಗವು ಮುಂಜಾನೆದ್ದು
ಮಜ್ಜನಗೈದು ಮನದೊಳ್
ಮಡಿಯುಟ್ಟು ಧ್ಯಾನವಂ ಮಾಳ್ಪಂತೆ
ಕಾಣಾ!. ಅಂತೆ ಮಜ್ಜಿಗೆಯೊಳ್
ಬೆಣ್ಣೆಕಡೆದು ತುಪ್ಪವಂ ಕಾಸಿ
ಭೋಜನವಂ ಮಾಡಿದಂತೆ
ಸತ್ಯವಾಣಿ!!.



ವಾಣಿ ಭಂಡಾರಿ.

## ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರೆಡ್ಡಿ ಸಚಿವರಾಗಿ ಪದಗ್ರಹಣ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಕೊಪ್ಪಳ ಜಿಲ್ಲೆಯ ಹಿರಿಯ ನಾಯಕ, ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರೆಡ್ಡಿ ಅವರು ಆಗಸ್ಟ್ 3ರಂದು ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು.**

ಬೆಂಗಳೂರಿನ ಲೋಕಭವನ ಆವರಣದಲ್ಲಿನ ಗಾಜಿನಮನೆಯಲ್ಲಿ ಆಗಸ್ಟ್ 3ರಂದು ಸಂಜೆ ನಡೆದ ಸಚಿವರ ಪದಗ್ರಹಣ



ಸಮಾರಂಭದಲ್ಲಿ ರಾಜ್ಯಪಾಲರಾದ ಥಾವರ್ ಚೆಂದ್ ಗೆಹ್ಲೋಟ್ ಅವರು ಶಾಸಕರಾದ ಬಸವರಾಜ ರಾಯರೆಡ್ಡಿ ಅವ–ರಿಗೆ ಪ್ರಮಾಣ ವಚನ ಬೋಧಿಸಿದರು. ಹಿನ್ನೆಲೆ: ಬಸವರಾಜ ರಾಯರೆಡ್ಡಿ ಅವರು ತಮ್ಮ ಸುಧೀರ್ಘ ರಾಜಕೀಯ ಜೀವನದಲ್ಲಿ 1985ರಿಂದ 1999, 2004, 2009, 2013–18 ಹಾಗೂ 2023ರ ಅವಧಿಯಲ್ಲಿ ಒಟ್ಟು 6 ಬಾರಿ ಶಾಸಕರಾಗಿ ವಿಧಾನಸಭೆ ಪ್ರವೇಶಿಸಿದ್ದಾರೆ.

1996 ರಿಂದ 1998ರವರೆಗೆ ಲೋಕಸಭಾ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದಾರೆ. 1994–96 ಮತ್ತು 2016–2018ರ ಅವಧಿಯಲ್ಲಿ ರಾಜ್ಯ ಸಂಪುಟದಲ್ಲಿ ಸಚಿವರಾಗಿ, 1989–94ರಲ್ಲಿ ವಿರೋಧಪಕ್ಷದ ಮುಖ್ಯ ಸಚೇತಕರಾಗಿ ಹಾಗೂ 1998–99ರಲ್ಲಿ ದೆಹಲಿ ವಿಶೇಷ ಪ್ರತಿನಿಧಿಯಾಗಿ ಕಾರ್ಯ ನಿರ್ವಹಿಸಿದ್ದಾರೆ. ಈ ಹಿಂದೆ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾಗಿಯೂ ಕರ್ತವ್ಯ ನಿರ್ವಹಿಸಿದ್ದಾರೆ. 2016–2018ರ ಅವಧಿಯಲ್ಲಿ ಉನ್ನತ ಶಿಕ್ಷಣ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ.

# ಕೊಪ್ಪಳದಲ್ಲಿ ಆಗಸ್ಟ್ 4ರಂದು ಬೃಹತ್ ಕಟ್ಟಡ ಕಾರ್ಮಿಕರ ಪ್ರತಿಭಟನಾ ಮೆರವಣಿಗೆಯ ಪೋಸ್ಟರ್ ಬಿಡುಗಡೆ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಕಟ್ಟಡ ಕಾರ್ಮಿಕರ ಶಾಸನಬದ್ಧ ಹಕ್ಕುಗಳ ರಕ್ಷಣೆ ಹಾಗೂ ದೀರ್ಘಕಾಲದಿಂದ ನನೆಗುದಿಗೆ ಬಿದ್ದಿರುವ ನ್ಯಾಯಸಮ್ಮತ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಆಗಸ್ಟ್ 4, 2026 ರಂದು ಬೆಳಿಗ್ಗೆ 10:30 ಗಂಟೆಗೆ ಕೊಪ್ಪಳ ನಗರದ ಅಶೋಕ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆಯನ್ನು ಆಯೋಜಿಸಲಾಗಿದೆ.ಈ ಸಂದರ್ಭದಲ್ಲಿ 'ಕೊಪ್ಪಳ ಜಿಲ್ಲಾ ಕಟ್ಟಡ ಕಾರ್ಮಿಕ ಸಂಘಟನೆಗಳ ಸಮನ್ವಯ ಸಮಿತಿ'ಯ ಮುಖಂಡ ಬಸವರಾಜ್ ಶೀಲವಂತರ್ ಹೋರಾಟದ ಪೋಸ್ಟರ್ ಗಳನ್ನು ಬಿಡುಗಡೆಗೊಳಿಸಿದರು.**

ಮುಖಂಡರು ಮಾತನಾಡಿ "ಕಾರ್ಮಿಕರ ಬೆವರಿನ ಶ್ರಮಕ್ಕೆ ಸಿಗಬೇಕಾದ ಮೂಲಭೂತ ಸೌಲಭ್ಯಗಳು ಸರ್ಕಾರದ ನಿರ್ಲಕ್ಷ್ಯದಿಂದಾಗಿ ವಂಚಿತವಾಗುತ್ತಿವೆ. ಮಾನ್ಯ ಹೈಕೋರ್ಟ್ ಆದ–'ೕಶಗಳಿದ್ದರೂ ಕಾನೂನಾತ್ಮಕ ಹಕ್ಕುಗಳು ಜಾ–



ರಿಯಾಗದಿರುವುದು ಖಂಡನೀಯ. ಕಾರ್ಮಿಕರ ಸಾಮಾಜಿಕ ಭದ್ರತೆ ಹಾಗೂ ಮಾನವೀಯ ಮೌಲ್ಯಗಳ ರಕ್ಷಣೆಗಾಗಿ ಈ ಹೋರಾಟವನ್ನು ಹಮ್ಮಿಕೊಳ್ಳಲಾಗಿದೆ" ಎಂದು ತಿಳಿಸಿದರು.

**ಪ್ರಮುಖ ಬೇಡಿಕೆಗಳು.**

ನೇರ ನಗದು ವರ್ಗಾವಣೆ (DBT): ಕಿಟ್ ಖರೀದಿ ಪದ್ಧತಿ ಮತ್ತು ಚೆಕ್ ವಿತರಣಾ ವ್ಯವಸ್ಥೆಯನ್ನು ರದ್ದುಪಡಿಸಿ, ಶೈಕ್ಷಣಿಕ, ಮದುವೆ ಹಾಗೂ ಹೆ–ರಿಗೆ ಸಹಾಯಧನವನ್ನು ನೇರವಾಗಿ ಕಾರ್ಮಿಕರ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕು. ಮಾನ್ಯ ಹೈಕೋರ್ಟ್ ತೀರ್ಪಿನಂತೆ ಬಾಕಿ ಇರುವ ಶೈಕ್ಷಣಿಕ ಸಹಾಯಧನವನ್ನು ತಕ್ಷಣವೇ ಬಿಡುಗಡೆಗೊಳಿಸಬೇಕು. ಮಾಸಿಕ ಪಿಂಚಣಿಯನ್ನು "5,000"ಕ್ಕೆ ಹಾಗೂ ಮದುವೆ ಸಹಾಯಧನವನ್ನು 2 ಲಕ್ಷಕ್ಕೆ ಹೆಚ್ಚಿಸಬೇಕು.

ಬೋಗಸ್ ಕಾರ್ಡ್‌ಗಳನ್ನು ಮತ್ತು ಅಂಬೇಡ್ಕರ್ ಕಾರ್ಮಿಕ ಸೇವಾ ಕೇಂದ್ರವನ್ನು ರದ್ದುಪಡಿಸಬೇಕು. ಪ್ರತಿಯೊಬ್ಬ ಅರ್ಹ ಕಟ್ಟಡ ಕಾರ್ಮಿಕನಿಗೆ ನಿವೇಶನ ಮತ್ತು ಉಚಿತ ವಸತಿ ಸೌಕರ್ಯ ಕಲ್ಪಿಸಬೇಕು. ಜಿಲ್ಲೆಯ ಮೂಲೆ ಮೂಲೆಗಳಿಂದ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಆಗಸ್ಟ್ 4ರ ಬೆಳಿಗ್ಗೆ 10:30ಕ್ಕೆ ನಡೆಯುವ ಈ ಐತಿಹಾಸಿಕ ಪ್ರತಿಭಟನಾ ಮೆರವಣಿಗೆಯನ್ನು ಯಶಸ್ವಿಗೊಳಿಸಬೇಕಾಗಿ ಸಮಿತಿ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ಖಾಸಿಮ್ ಸರ್ದಾರ್, ಎಸ್.ಎ.ಗಫಾರ್, ಶರಣು ಗಡ್ಡಿ, ತುಕಾರಾಮ್ ಪಾತ್ರೋಟಿ, ಪಾಸ್ಟರ್ಸ್ ಅಸೋಸಿಯೇಷನ್ ಜಿಲ್ಲಾಧ್ಯಕ್ಷ ಚನ್ನಬಸಪ್ಪ ಅಪ್ಪಣ್ಣವರ್, ಗಾಳೆಪ್ಪ ಮುಂಗೋಲಿ, ಅಮೀರ್ ಪಾಷಾ, ಮಂಜುನಾಥ, ಪಕೀರಪ್ಪ, ಪ್ರಕಾಶ ಸೇರಿದಂತೆ ಸಮನ್ವಯ ಸಮಿತಿಯ ವಿವಿಧ ಪದಾಧಿಕಾರಿಗಳು ಹಾಗೂ ಕಾರ್ಮಿಕ ಮುಖಂಡರು ಭಾಗವಹಿಸಿದ್ದರು.

# ಶಿಸ್ತು, ಪ್ರಾಮಾಣಿಕತೆ ಮತ್ತು ನಿಷ್ಕಾಮ ಸೇವೆಗೆ ಸಂದ ಗೌರವ: ಕಂಪನಿ ಕಮಾಂಡರ್ ವೀರಣ್ಣ ಕೆ. ಬಡಿಗೇರ ಅವರಿಗೆ ಅದ್ದೂರಿ ವಯೋನಿವೃತ್ತಿ ಸನ್ಮಾನ

ಅ.ಶ. ಸುದ್ದಿ ಕುಕನೂರು

**ಕುಕನೂರು: ಕರ್ನಾಟಕ ರಾಜ್ಯ ಗೃಹರಕ್ಷಕ ದಳ, ಕೊಪ್ಪಳ ಜಿಲ್ಲಾ ಘಟಕದ ಕಂಪನಿ ಕಮಾಂಡರ್ ಶ್ರೀ ವೀರಣ್ಣ ಕೆ. ಬಡಿಗೇರ ಅವರ ವಯೋನಿವೃತ್ತಿ ಅಂಗವಾಗಿ, ಅವರ ಸುದೀರ್ಘ, ಶಿಸ್ತುಬದ್ಧ ಹಾಗೂ ಆದರ್ಶ ಸೇವೆಯನ್ನು ಗೌರವಿಸಿ ವಯೋನಿವೃತ್ತಿ ಸನ್ಮಾನ ಹಾಗೂ "ಅತ್ಯುತ್ತಮ ಶ್ರೇಷ್ಠ ಘಟಕ" ಪ್ರಶಸ್ತಿ ಪ್ರದಾನ ಸಮಾರಂಭ ಸೋಮವಾರ ಬೆಳಿಗ್ಗೆ 10 ಗಂಟೆಗೆ ಕುಕನೂರಿನ ಶ್ರೀ ಅನ್ನದಾನೇಶ್ವರ ಶಾಖಾಮಠದಲ್ಲಿ ಪರಮಪೂಜ್ಯ ಶ್ರೀ ಮಹಾದೇವ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಭವ್ಯವಾಗಿ ನಡೆಯಿತು.**

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಶ್ರೀ ಮಹಾದೇವ ಮಹಾಸ್ವಾಮಿಗಳು, "ಶಿಸ್ತು, ಪ್ರಾಮಾಣಿಕತೆ ಹಾಗೂ ನಿಷ್ಕಾಮ ಸೇವೆಯ ಮೂಲಕ ಕಂಪನಿ ಕಮಾಂಡರ್ ವೀರಣ್ಣ ಕೆ. ಬಡಿಗೇರ ಅವರು ಎಲ್ಲರಿಗೂ ಮಾದರಿಯಾಗಿದ್ದಾರೆ. ಅವರಿಗೆ ಸಂದಿರುವ ಗೌರವವು ಅವರ ಕರ್ತವ್ಯನಿಷ್ಠೆ ಮತ್ತು ಸೇವಾ ಮನೋಭಾವಕ್ಕೆ ದೊರೆತ ಪ್ರತಿಫಲವಾಗಿದೆ" ಎಂದು ಹೇಳಿದರು. ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಿನ ದ್ಯಾಂಪೂರ ಗ್ರಾಮದವರಾದ ವೀರಣ್ಣ ಕೆ. ಬಡಿಗೇರ ಅವರು 1993ರ ಡಿಸೆಂಬರ್ 1ರಂದು ಗೃಹರಕ್ಷಕ ದಳಕ್ಕೆ ಸೇರ್ಪಡೆಗೊಂಡು ಸತತ 33 ವರ್ಷಗಳ ಕಾಲ ಶಿಸ್ತು, ಪ್ರಾಮಾಣಿಕತೆ, ಸಮಯಪಾಲನೆ ಹಾಗೂ ನಿಸ್ವಾಥ–ರ್ ಸೇವೆಯ ಮೂಲಕ ಕರ್ತವ್ಯ ನಿರ್ವಹಿಸಿದ್ದಾರೆ.



ಅಧಿಕಾರಿಯಾಗಿ ಯಾವುದೇ ಅಂತರ ಕಾಯ್ದುಕೊಳ್ಳದೆ ಗೃಹರಕ್ಷಕ ದಳದ ಸಿಬ್ಬಂದಿಯೊಂದಿಗೆ ಆತ್ಮೀಯವಾಗಿ ಬೆರೆತು ಘಟಕವನ್ನು ಸಮರ್ಥವಾಗಿ ಮುನ್ನಡೆಸಿರುವುದು ಅವರ ವಿಶೇಷತೆಯಾಗಿದೆ. ಅವರ ಕರ್ತವ್ಯನಿಷ್ಠೆ ಹಾಗೂ ಶ್ಲಾಘನೀಯ ಸೇವೆಯನ್ನು ಗುರುತಿಸಿ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ಚಿನ್ನದ ಪದಕ ಹಾಗೂ ಭಾರತ ಸರ್ಕಾರದ ರಾಷ್ಟ್ರಪತಿಗಳ ಶ್ಲಾಘನೀಯ ಸೇವಾ ಪದಕ ಸೇರಿದಂತೆ ಹಲವು ಪ್ರತಿಷ್ಠಿತ ಗೌರವಗಳು ಅವರಿಗೆ ಲಭಿಸಿವೆ. ಮುಂದಿನ ಅವರ ನಿವೃತ್ತಿ ಜೀವನ ಸುಖ ಶಾಂತಿ ನೆಮ್ಮದಿ ಆರೋಗ್ಯದಿಂದ ಕೂಡಿರಲಿ ಎಂದು ಶುಭ ಕೋರಿ ಆಶೀರ್ವದಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಮಾಜಿ ಕೊಪ್ಪಳ ಜಿಲ್ಲಾ ಗೃಹರಕ್ಷಕ ದಳ ಸಮಾದೇಷ್ಟರು ಸೋಮನಗೌಡ ಎಂ. ಪಾಟೀಲ್, ವೀರಣ್ಣ ಕೆ. ಬಡಿಗೇರ ಅವರು ಕೋವಿಡ್–19 ಸಂಕಷ್ಟದ ಸಂದರ್ಭದಲ್ಲಿ ತಮ್ಮ ಜೀವದ ಹಂಗನ್ನು ತೊರೆದು ಗೃಹರಕ್ಷಕರೊಂದಿಗೆ ಜನಸೇವೆ ಸಲ್ಲಿಸಿದ್ದು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆದ ಚುನಾವಣಾ ಕರ್ತವ್ಯಗಳನ್ನು ಕುಕನೂರು, ಯಲಬುರ್ಗಾ, ಕೊಪ್ಪಳ ಸೇರಿದಂತೆ 13 ಘಟಕಗಳ ಗೃಹರಕ್ಷಕರೊಂದಿಗೆ ಅಚ್ಚುಕಟ್ಟಾಗಿ ನಿರ್ವಹಿಸಿದ್ದಾರೆ ಅವರ ಸಮರ್ಥ ನಾಯಕತ್ವ ಹಾಗೂ ಗೃಹರಕ್ಷಕರ ಉತ್ತಮ ಕಾರ್ಯನಿರ್ವಹಣೆಯಿಂದ ಕುಕನೂರು ಘಟಕಕ್ಕೆ "ಅತ್ಯುತ್ತಮ ಶ್ರೇಷ್ಠ ಘಟಕ" ಎಂಬ ಗೌರವ ದೊರೆತಿದೆ.

ವೀರಣ್ಣ ಕೆ. ಬಡಿಗೇರ ಅವರ ಶಿಸ್ತು, ಸಮಯಪಾಲನೆ ಹಾಗೂ ಪ್ರಾಮಾಣಿಕತೆ ಎಲ್ಲ ಗೃಹರಕ್ಷಕರಿಗೂ ಮಾದರಿಯಾಗಿದ್ದು, ಅವರ ವಯೋನಿವೃತ್ತಿ ಜೀವನ ಸುಖ, ಶಾಂತಿ ಮತ್ತು ಆರೋಗ್ಯದಿಂದ ಕೂಡಿರಲಿ ಎಂದು ಶುಭ ಹಾರೈಸಿದರು.





ಅಧ್ಯಕ್ಷತೆ ವಹಿಸಿ ಮಾತನಾಡಿದ ಕಂಪನಿ ಕಮಾಂಡರ್ ವೀರಣ್ಣ ಕೆ. ಬಡಿಗೇರ, ತಮ್ಮ ಯಶಸ್ಸಿನ ಹಿಂದೆ ಮಾಜಿ ಸಮಾದೇಷ್ಠರಾದ ಸೋಮನಗೌಡ ಎಂ. ಪಾಟೀಲ್ ಅವರ ಮಾರ್ಗದರ್ಶನ, ಗೃಹರಕ್ಷಕ ದಳದ ಸಿಬ್ಬಂದಿಯ ಸಹಕಾರ ಹಾಗೂ ಕುಟುಂಬದ ಬೆಂಬಲವೇ ಪ್ರಮುಖ ಕಾರಣವಾಗಿದೆ. ಎಲ್ಲರ ಸಹಕಾರದಿಂದಲೇ ಪ್ರಶಸ್ತಿಗಳು ಹಾಗೂ ಗೌರವಗಳು ಲಭಿಸಿವೆ ಎಂದು ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಂಪನಿ ಕಮಾಂಡರ್ ವೀರಣ್ಣ ಕೆ. ಬಡಿಗೇರ ಅವರ ಶಿಸ್ತು, ಪ್ರಾಮಾಣಿಕತೆ ಹಾಗೂ ನಿಸ್ವಾರ್ಥ ಸೇವೆಯನ್ನು ಸ್ಮರಿಸಿ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ನಿರೂಪಣೆಯನ್ನು ಗುರುರಾಜ ದೇಸಾಯಿ ಕರಮುಡಿ ನೆರವೇರಿಸಿದರು. ರವೀಂದ್ರ ಎಸ್. ಬಾಕಳೆ ಸ್ವಾಗತಿಸಿದರು. ವರದಿ ವಾಚನವನ್ನು ನಾಗರಾಜ ಬಡಿಗೇರ ನೆರವೇರಿಸಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ವಿವಿಧ ಅಧಿಕಾರಿಗಳು ಹಾಗೂ ಗುರು ಹಿರಿಯರು ಮಾತನಾಡಿದರು. ಸಮಾರಂಭದಲ್ಲಿ ಅಗ್ನಿಶಾಮಕ ಠಾಣಾಧಿಕಾರಿ ಜನಾರ್ಧನ್ ಕೆ., ಕರ್ನಾಟಕ ಗ್ರಾಮೀಣ ಬ್ಯಾಂಕ್ ನಿವೃತ್ತ ವ್ಯವಸ್ಥಾಪಕ ಬಸವನಗೌಡ ಮಾಲಿ ಪಾಟೀಲ್, ಲಕ್ಷ್ಮಣ ಬಿದವಟ್ಟಿ, ವೀರಣ್ಣ ಅಣ್ಣಿಗೇರಿ, ಎನ್.ಎಂ. ಬಡಿಗೇರ್ (ಶಿಕ್ಷಕರು), ಶಂಕರ್ ಪತ್ತಾರ್, ಈಶ್ವರಯ್ಯ ಶಿರೂರುಮಠ, ಅಂದಪ್ಪ ಜವಳಿ, ಎನ್.ಆರ್. ಕುಕನೂರು, ಜಂಬಣ್ಣ ಅಂಗಡಿ, ಲಕ್ಷ್ಮಣ ಕಾಳಿ, ಮೆಹಬೂಬ ಪಠಾಣ್, ಜಗನ್ನಾಥ, ಹುಲ್ಲಣಸಾ ತುಳಸಿಕಟ್ಟಿ, ಡಿ.ಆರ್. ಕುಲಕರ್ಣಿ, ದೇವೇಂದ್ರಪ್ಪ ಕಮ್ಮಾರ, ರಾಮಣ್ಣ ಮುದ್ದೂರಾವ್ ಜಗತ್ತಾಪ ಸೇರಿದಂತೆ ಗೃಹರಕ್ಷಕ ದಳದ ಹಿರಿಯ ಅಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಗಣ್ಯರು, ಗೃಹರಕ್ಷಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ವರದಿಗಾರರು: ಚನ್ನಯ್ಯ ಹಿರೇಮಠ, ಕುಕನೂರು

## ನಿಧನ ವಾರ್ತೆ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಯಮನಪ್ಪ ತಂದೆ ಕುಂಟೆಪ್ಪ ಭಾವಿಕಟ್ಟಿ ವಯಸ್ಸು (73) ಸಾಕಿನ : ಹನುಮನಹಟ್ಟಿ, ತಾಲೂಕು: ಕೊಪ್ಪಳ, ಜಿಲ್ಲೆ: ಕೊಪ್ಪಳ ಹನುಮನಹಟ್ಟಿ ಗ್ರಾಮದ ನಿವಾಸಿಯಾದ ಯಮನಪ್ಪ ತಂದೆ ಕುಂಟೆಪ್ಪ ಭಾವಿಕಟ್ಟಿ ವಯಸ್ಸು (73) ಅವರು ದಿನಾಂಕ 02–08–2026 ರಂದು ರಾತ್ರಿ 11:30 ಗಂಟೆಗೆ ಅಕಾಲಿಕ ನಿಧನರಾದರು.**



ಇವರಿಗೆ ಇಬ್ಬರು ಪುತ್ರರು, ಮೂವರು ಪುತ್ರಿಯರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಬಿಟ್ಟು ಅಗಲಿದ್ದಾರೆ. ಅವರ ನಿಧನದಿಂದ ಕುಟುಂಬದ ಸದಸ್ಯರು, ಬಂಧು–ಬಳಗ ಹಾಗೂ ಹನುಮನಹಟ್ಟಿ ಗ್ರಾಮದ ನಿವಾಸಿಗಳಲ್ಲಿ ತೀವ್ರ ಶೋಕದ ವಾತಾವರಣ ನಿರ್ಮಾಣವಾಗಿದೆ. ಭಗವಂತನು ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ ಹಾಗೂ ಅವರ ಕುಟುಂಬದ ಸದಸ್ಯರಿಗೆ ಈ ದುಃಖವನ್ನು ಭರಿಸುವ ಶಕ್ತಿ ನೀಡಲಿ ಎಂದು ಬಂಧು–ಬಳಗದವರು ಪ್ರಾರ್ಥಿಸಿದ್ದಾರೆ.

## ಆಗಸ್ಟ್ 4 ಮತ್ತು 5 ರಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಿಂದ ಜಿಲ್ಲಾ ಪ್ರವಾಸ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಸಂತೋಷ ಕುಮಾರ ಮತ್ತು ಸದಸ್ಯರಾದ ಸತ್ಯನಾರಾಯಣ ಶೆಟ್ಟಿರವರು ಆಗಸ್ಟ್ 4 ಮತ್ತು 5 ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ. ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು ಆಗಸ್ಟ್ 4 ರಂದು ಸಂಜೆ 6 ಗಂಟೆಗೆ ಕೊಪ್ಪಳಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು.**

ಆಗಸ್ಟ್ 5 ರಂದು ಜಿಲ್ಲೆಯ ವಸತಿ ನಿಲಯಗಳು, ಅಂಗನವಾಡಿಗಳು, ಶಾಲೆ, ಕಿಮ್ಸ್ ಆಸ್ಪತ್ರೆ, ಪೊಲೀಸ್ ಠಾಣೆ ಮತ್ತು ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತಿಯ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಚರ್ಚೆ ನಡೆಸುವರು. ಅಧ್ಯಕ್ಷರ ಭೇಟಿಯ ಸಮಯದಲ್ಲಿ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಹಾಜರಿರಬೇಕು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೆದ್ದಲಗಟ್ಟಿ ಸೋಮನಾಥ ರವರಿಗೆ ಸುನಾಮಿ ರಾಷ್ಟ್ರೀಯ ಮಾಧ್ಯಮ ಪ್ರಶಸ್ತಿ

ಅ.ಶ. ಸುದ್ದಿ ಹಗರಿಬೊಮ್ಮನಹಳ್ಳಿ

**ಹಗರಿಬೊಮ್ಮನಹಳ್ಳಿ: ಸುನಾಮಿ ಪತ್ರಿಕೆ ವತಿಯಿಂದ ದಶಕದ ಸಂಭ್ರಮದಲ್ಲಿ ಪ್ರತಿಷ್ಠಿತ ಸುನಾಮಿ ರಾಷ್ಟ್ರೀಯ ಮಾಧ್ಯಮ ಪ್ರಶಸ್ತಿ 2026ಕ್ಕೆ ಈ ಸಮಯ ನ್ಯೂಸ್ ದಿನಪತ್ರಿಕೆಯ ಸಂಪಾದಕರು,ವಿ–ಜಯನಗರವಾಣಿ ವರದಿಗಾರರಾದ ಗೆದ್ದಲಗಟ್ಟಿ . ಸೋಮನಾಥ್ ರವರು ಆಯ್ಕೆಯಾಗಿದ್ದಾರೆ. ಸುನಾಮಿ ಪತ್ರಿಕೆಯ ದಶಕದ ಸಂಭ್ರಮದ ಅಂಗವಾಗಿ "ಬದಲಾವಣೆಯ ಅಲೆಗೆ ಹತ್ತರ ಸಂಭ್ರಮ ಸಾಧಕರ ಜಗತ್ತಿಗೆ ಸುನಾಮಿ ಪ್ರಣಾಮ" ಎಂಬ ಧ್ಯೇಯದೊಂದಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆಗಸ್ಟ್ 5ರಂದು (ಬುಧವಾರ) ಬೆಳಿಗ್ಗೆ 10.30ಕ್ಕೆ ಬೆಂಗಳೂರಿನ ಗಾಂಧಿ ಭವನ, ಕುಮಾರಕೃಪಾ ರಸ್ತೆಯಲ್ಲಿ ಆಯೋಜಿಸಲಾಗಿದೆ.**

ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಮುಖ್ಯಮಂತ್ರಿ ಹಾಗೂ ಮಾಜಿ ಕೇಂದ್ರ ಸಚಿವರಾದ ಡಾ. ಎಂ. ವೀರಪ್ಪ ಮೊಯ್ಲಿ ರವರು ಅಧ್ಯಕ್ಷತೆ ಬಳ್ಳಾರಿ ಲೋಕಸಭಾ



ಸದಸ್ಯರಾದ ಈ.ತುಕಾರಾಂ ರವರು ವಿಶೇಷ ಆಹ್ವಾನಿರಾದ ಡಾ.ಕುಂ.ವೀರಭದ್ರಪ್ಪ ರವರು ಅಧ್ಯಕ್ಷತೆಯನ್ನು ಸುನಾಮಿ ಪತ್ರಿಕೆಯ ಸಂಪಾದಕರಾದ ಹಳ್ಳಿ ಪ್ರಕಾಶ್ ವಹಿಸಲಿದ್ದು, ರಾಜ್ಯದ ವಿವಿಧ ಭಾಗಗಳಿಂದ ಹಿರಿಯ ಪತ್ರಕರ್ತರು, ಸಂಪಾದಕರು, ಮಾಧ್ಯಮ ಪ್ರತಿನಿಧಿಗಳು, ಸಾಹಿತಿಗಳು, ಸಾಮಾಜಿ–ಕ ಮುಖಂಡರು, ಜನಪ್ರತಿನಿಧಿಗಳು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಲಿದ್ದಾರೆ. ಮಾಧ್ಯಮ ಕ್ಷೇತ್ರದಲ್ಲಿ ಗೆದ್ದಲಗಟ್ಟಿ. ಸೋಮನಾಥ್ ಅವರು ಸಲ್ಲಿಸಿರುವ ವಿಶಿಷ್ಟ ಸೇವೆ, ಜನಪರ ಪತ್ರಿಕೋದ್ಯಮ, ಸಮಾಜಮುಖಿ ವರದಿಗಾ–ರಿಕೆ ಹಾಗೂ ಗ್ರಾಮೀಣ ಸಮಸ್ಯೆಗಳನ್ನು ಜನಪ್ರತಿನಿಧಿಗಳ ಮತ್ತು ಸರ್ಕಾರದ ಗಮನಕ್ಕೆ ತರುವಲ್ಲಿ ಅವರು ವಹಿಸಿರುವ ಮಹತ್ವದ ಪಾತ್ರವನ್ನು ಪರಿಗಣಿಸಿ ಅವ–ರಿಗೆ ಸುನಾಮಿ ರಾಷ್ಟ್ರೀಯ ಮಾಧ್ಯಮ ಪ್ರಶಸ್ತಿ 2026 ಪ್ರದಾನ ಮಾಡಲಾಗುತ್ತಿದೆ.

ಇದೇ ಸಂದರ್ಭದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಆಯ್ಕೆಯಾದ ಮಾಧ್ಯಮ ಕ್ಷೇತ್ರದ ಸಾಧಕರು, ಹಾಗೂ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಸನ್ಮಾನಿಸಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು. ಜೊತೆಗೆ ಸುನಾಮಿ ಪತ್ರಿಕೆಯ ದಶಕದ ಪಯಣ, ಮಾಧ್ಯಮ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಗಳು, ಸಮಾಜಮುಖಿ ಕಾರ್ಯಗಳು ಹಾಗೂ ಪತ್ರಿಕೆಯ ಸಾಧನೆಗಳ ಕುರಿತು ವಿಶೇಷ ಪರಿಚಯ ಕಾರ್ಯಕ್ರಮವೂ ನಡೆಯಲಿದೆ. ಜಿ. ಸೋಮನಾಥ್ ಅವರಿಗೆ ಸುನಾಮಿ "ರಾಷ್ಟ್ರೀಯ ಮಾಧ್ಯಮ" ಪ್ರಶಸ್ತಿ ಲಭಿಸಿರುವುದಕ್ಕೆ ಜನನಿ ಸೇವಾ ಟ್ರಸ್ಟ್ ಅಧ್ಯಕ್ಷ ಎ. ಕೇಶವಮೂರ್ತಿ ಅವರು ಅಭಿನಂದನೆ ಸಲ್ಲಿಸಿದ್ದಾರೆ.

ಟ್ರಸ್ಟ್‌ನ ಪದಾಧಿಕಾರಿಗಳು ಹಾಗೂ ವಿಎಸ್ಎಸ್ಎನ್ ಅಧ್ಯಕ್ಷರಾದ ಕೆ.ಹುಲುಗಪ್ಪ. ಯುವ ಮುಖಂಡ ಎಸ್. ಚಂದ್ರು, ಬಂಟ್ರ ಕುಬೇರ, ವಿ. ಗೋವಿಂದ, ಶಿಗೇನಹಳ್ಳಿ ಮಾರುತಿ,ಟಿ. ಹನುಮಂತ,ಕೆ.ವಿಶ್ವನಾಥ,ಗುಂಡಾ ಹನುಮಂತ, ದೊಡ್ಡ ಸೋಮಣ್ಣ,ಹನಸಿ ಮಾರ್ಗೇಶ್, ತಳವಾರ ರಾಮಣ್ಣ, ಮುಂಡರಗಿ ಮಂಜುನಾಥ–,ಬಂಟ್ರ ಹರೀಶ್ ,ಖಾಜಹುಸೇನ್, ಓಬಳಾಪುರ ವೆಂಕಟೇಶ, ಹೆಗ್ಡಾಳ್ ಯಮನೂರು ಹಾಗೂ ಹಡಗಲಿ ಖಾಜಾ ಅವರು ಜಿ. ಸೋಮನಾಥ್ ಅವರಿಗೆ ಶುಭ ಹಾರೈಸಿ, ಇನ್ನಷ್ಟು ಜನಪರ ಪತ್ರಿಕೋದ್ಯಮದ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸುವಂತಾಗಲಿ ಎಂದು ಆಶಿಸಿದ್ದಾರೆ.

## ಜನಪರ ವರದಿಗಾರಿಕೆಗೆ ಮನ್ನಣೆ : ಬ್ರಹ್ಮಾನಂದ ಬಡಿಗೇರಗೆ ಕೆಯುಡಬ್ಲ್ಯೂಜೆ ಜಿಲ್ಲಾ ಮಟ್ಟದ ಉತ್ತಮ ವರದಿಗಾರ ಪ್ರಶಸ್ತಿ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ), ಬೆಂಗಳೂರು ರಾಜ್ಯ ಘಟಕದ ಮಾರ್ಗದರ್ಶನದಲ್ಲಿ ಕೆಯುಡಬ್ಲ್ಯೂಜೆ ಕೊಪ್ಪಳ ಜಿಲ್ಲಾ ಘಟಕವು ಪತ್ರಿಕಾ ದಿನಾಚರಣೆ ಅಂಗವಾಗಿ ಪ್ರತಿವರ್ಷ ನೀಡುವ ಪ್ರತಿಷ್ಠಿತ ಜಿಲ್ಲಾ ಮಟ್ಟದ ವಾರ್ಷಿಕ ಉತ್ತಮ ವರದಿಗಾರ ಪ್ರಶಸ್ತಿಗೆ ಈಶಾನ್ಯ ಟೈಮ್ಸ್ ದಿನಪತ್ರಿಕೆಯ ಕೊಪ್ಪಳ ಜಿಲ್ಲಾ ವರದಿಗಾರ ಬ್ರಹ್ಮಾನಂದ ಬಡಿಗೇರ ಅವರು ಆಯ್ಕೆಯಾಗಿದ್ದಾರೆ.**

ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಬ್ರಹ್ಮಾನಂದ ಬಡಿಗೇರ ಅವರು ಸಾಮಾಜಿಕ ಸಮಸ್ಯೆಗಳು, ಜನಪರ ವಿಷಯಗಳು, ಆಡಳಿತಾತ್ಮಕ ಬೆಳವಣಿಗೆಗಳು, ಗ್ರಾಮೀಣ ಬದುಕಿನ ಸಮಸ್ಯೆಗಳು, ರೈತರ ಸಂಕಷ್ಟ, ಸಾರ್ವಜನಿಕ ಹಿತಾಸಕ್ತಿ ಹಾಗೂ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳನ್ನು ವಸ್ತುನಿಷ್ಠವಾಗಿ



ಮತ್ತು ನಿರಂತರವಾಗಿ ವರದಿ ಮಾಡುವ ಮೂಲಕ ಓದುಗರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಅವರ ಸಮಾಜಮುಖಿ ವರದಿಗಾರಿಕೆ, ಜವಾಬ್ದಾರಿಯುತ ಪತ್ರಿಕೋದ್ಯಮ, ನಿಖರ ಮಾಹಿತಿ ಸಂಗ್ರಹಣೆ ಹಾಗೂ ಪರಿಣಾಮಕಾರಿ ಬರಹಗಳನ್ನು ಪರಿಗಣಿಸಿ ಈ ವರ್ಷದ ಜಿಲ್ಲಾ ಮಟ್ಟದ ವಾರ್ಷಿಕ ಉತ್ತಮ ವರದಿಗಾರ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಸಂಘದ ಮೂಲಗಳು ತಿಳಿಸಿವೆ. ಕೊಪ್ಪಳ ಜಿಲ್ಲಾ ಕೆಯುಡಬ್ಲ್ಯೂಜೆ ಘಟಕದ ವತಿಯಿಂದ ಆಯೋಜಿಸಲಾಗಿರುವ ಪತ್ರಿಕಾ ದಿನಾಚರಣೆ ಸಮಾರಂಭದಲ್ಲಿ ಬ್ರಹ್ಮಾನಂದ ಬಡಿಗೇರ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ, ಸನ್ಮಾನಿಸಿ ಗೌರವಿಸಲಾಗುವುದು.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸುವ ಹಿರಿಯ ಪತ್ರಕರ್ತರು, ಗಣ್ಯರು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರ ಸಮ್ಮುಖದಲ್ಲಿ ಈ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯಲಿದೆ. ಪ್ರಶಸ್ತಿ ಆಯ್ಕೆಯ ಕುರಿತು ಪ್ರತಿಕ್ರಿಯಿಸಿದ ಬ್ರಹ್ಮಾನಂದ ಬಡಿಗೇರ ಅವರು, ನನ್ನ ಪತ್ರಿಕೋದ್ಯಮದ ಸೇವೆಯನ್ನು ಗುರುತಿಸಿ ಈ ಗೌರವಕ್ಕೆ ಆಯ್ಕೆ ಮಾಡಿದ ಕೆಯುಡಬ್ಲ್ಯೂಜೆ ರಾಜ್ಯ ಹಾಗೂ ಜಿಲ್ಲಾ ಘಟಕದ ಪದಾಧಿಕಾರಿಗಳು, ಪ್ರಶಸ್ತಿ ಆಯ್ಕೆ ಸಮಿತಿ ಸದಸ್ಯರು ಮತ್ತು ನನ್ನ ಬರಹಗಳಿಗೆ ಸದಾ ಪ್ರೋತ್ಸಾಹ ನೀಡಿದ ಓದುಗರು, ಸಹೋದ್ಯೋಗಿಗಳು ಹಾಗೂ ಹಿತೈಷಿಗಳಿಗೆ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಈ ಪ್ರಶಸ್ತಿ ನನ್ನ ಜವಾಬ್ದಾ–ರಿಯನ್ನು ಇನ್ನಷ್ಟು ಹೆಚ್ಚಿಸಿದ್ದು, ಮುಂದೆಯೂ ಜನಪರ ಮತ್ತು ನಿಷ್ಪಕ್ಷಪಾತ ಪತ್ರಿಕೋದ್ಯಮಕ್ಕೆ ಬದ್ಧನಾಗಿರುತ್ತೇನೆ, ಎಂದು ತಿಳಿಸಿದ್ದಾರೆ. ಬ್ರಹ್ಮಾನಂದ ಬಡಿಗೇರ ಅವರ ಈ ಸಾಧನೆಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಘಟಕಗಳ ಪದಾಧಿಕಾರಿಗಳು, ಸದಸ್ಯರು, ವಿವಿಧ ಮಾಧ್ಯಮ ಸಂಸ್ಥೆಗಳ ಪತ್ರಕರ್ತರು, ಸಾರ್ವಜನಿಕರು ಹಾಗೂ ಹಿತೈಷಿಗಳು ಅಭಿನಂದನೆ ಸಲ್ಲಿಸಿ, ಅವರ ಪತ್ರಿಕೋದ್ಯಮದ ಪಯಣ ಇನ್ನಷ್ಟು ಯಶಸ್ವಿಯಾಗಲಿ ಎಂದು ಶುಭ ಹಾರೈಸಿದ್ದಾರೆ.

# ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ವಾತಂತ್ರ್ಯೋತ್ಸವದ ಪೂರ್ವಭಾವಿ ಸಿದ್ಧತಾ ಸಭೆ

## ಸ್ವಾತಂತ್ರ್ಯ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ಡಾ.ಸುರೇಶ ಇಟ್ನಾಳ ಸೂಚನೆ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಆಗಸ್ಟ್ 15 ರಂದು ನಡೆಯಲಿರುವ 80ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವನ್ನು ಕೊಪ್ಪಳ ಜಿಲ್ಲೆಯಲ್ಲಿ ಅರ್ಥಪೂರ್ಣವಾಗಿ ಆಚ–ರಿಸಲು ಎಲ್ಲಾ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸೂಚನೆ ನೀಡಿದರು. 80ನೇ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಗಸ್ಟ್ 3ರಂದು ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾ–ರಿಗಳೊಂದಿಗೆ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.**

ಆಗಸ್ಟ್ 15ರಂದು ಬೆಳಗ್ಗೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಹಾಗೂ ಅಂದು ಬೆಳಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಧ್ವಜಾರೋಹಣ ಕಾರ್ಯಕ್ರಮ ನಡೆಯಲಿದ್ದು, ಎಲ್ಲ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಕಡ್ಡಾಯ ಪಾಲ್ಗೊಳ್ಳಬೇಕು. ಯಾವುದೇ ನಿಯಮಗಳು ಉಲ್ಲಂಘನೆಯಾಗದಂತೆ ಹಾಗೂ ಸರ್ಕಾರದ ಶಿಷ್ಟಾಚಾರ ಪಾಲನೆಯೊಂದಿಗೆ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಹಾಗೂ ಅಥ–ರ್ಪೂರ್ಣವಾಗಿ ಆಯೋಜನೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಜಿಲ್ಲಾ ಕೇಂದ್ರದ ಪ್ರಮುಖ ರಸ್ತೆಗಳು ಹಾಗೂ ವೃತ್ತಗಳನ್ನು ಸ್ವಚ್ಛಗೊಳಿಸಬೇಕು. ವಿವಿಧೆಡೆ ದೀಪಾಲಂಕಾರ ಮಾಡಬೇಕು. ಜಿಲ್ಲಾ ಕ್ರೀಡಾಂಗಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ವಿವಿಧ ತುಕಡಿಗಳಿಂದ ಪಥ ಸಂಚಲನವು ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕು.

ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಸ್ವಾತಂತ್ರ್ಯ ಚಳುವಳಿಗಳನ್ನು ನೆನಪಿಸುವಂತಹ ರೀತಿಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ವಿಭಿನ್ನವಾಗಿ ನಡೆಯಬೇಕು. ಕ್ರೀಡಾಂಗಣದಲ್ಲಿ ಆರೋಗ್ಯ ಇಲಾಖೆಯಿಂದ ತುರ್ತು ಪರಿಸ್ಥಿತಿ ನಿರ್ವಹಣೆಗಾಗಿ ಅಗತ್ಯ ಸಿಬ್ಬಂದಿಯೊಂದಿಗೆ ಅಂಬ್ಯುಲೆನ್ಸ್, ಅಗ್ನಿಶಾಮಕ ಇಲಾಖೆಯಿಂದ ಅಗ್ನಿಶಾಮಕ ವಾಹನಗಳನ್ನು ಕಾಯ್ದಿ–ರಿಸಬೇಕು. ಪಥಸಂಚಲನದಲ್ಲಿ ಪೌರಕಾರ್ಮಿಕರ ಒಂದು ತಂಡವು ಸಹ ಪಾಲ್ಗೊಳ್ಳುವಂತೆ ಕೊಪ್ಪಳ ನಗರಸಭೆಯ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಸ್ವಾತಂತ್ರ?ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮಕ್ಕಳಿಗೆ ಹಾಗೂ ಪಥಸಂಚಲನ ಪೂರ್ವಭಾವಿ ತರಬೇತಿಗೆ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ಕೆ.ಕೆ.ಎಸ್.ಆರ್.ಟಿ.ಸಿ ವತಿಯಿಂದ ಬಸ್ ಸೌಕರ್ಯ ಒದಗಿಸಬೇಕು. ಮಕ್ಕಳಿಗೆ ಹಾಲು ಅಥವಾ ಲಘು ಉಪಹಾರ ವಿತರಣೆಗೆ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ–ರಿಗಳಾದ ಡಾ. ರಾಮ್ ಎಲ್. ಅರಸಿದ್ದಿ ಅವರು ಮಾತನಾಡಿ, ಸ್ವಾತಂತರ್ಯೋತ್ಸವ ದಿನಾಚರಣೆ ಅಂಗವಾಗಿ ನಡೆಯುವ ಪಥಸಂಚಲನವು ಶಿಸ್ತುಬದ್ಧ ಮತ್ತು ಅಚ್ಚುಕಟ್ಟಾಗಿರಬೇಕು. ಇದಕ್ಕಾಗಿ ನೀಡಲಾಗುವ ಪೂರ್ವಭಾವಿ ತರಬೇತಿಯಲ್ಲಿ ಆಯಾ ತಂಡದ ಮಕ್ಕಳು ಪಾಲ್ಗೊಳ್ಳಬೇಕು. ಪ್ಲಾಸ್ಟಿಕ್ ಧ್ವಜವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದ್ದು, ಯಾವ ಅಂಗಡಿಗಳಲ್ಲೂ ಪ್ಲಾಸ್ಟಿಕ್ ಧ್ವಜ ಮಾರಾಟವಾಗದಂತೆ ನಗರಸಭೆ ಸೇರಿದಂತೆ ಸ್ಥಳೀಯ ಸಂಸ್ಥೆಗಳು ಕ್ರಮಕೈಗೊಳ್ಳಬೇಕು ಹಾಗೂ ಈ ಬಗ್ಗೆ ಸಾರ್ವಜನಿಕರಿಗೂ ಮಾಹಿತಿ ನೀಡಬೇಕು ಎಂದರು.

ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಮಾತನಾಡಿ, ಸ್ವಾತಂತ್ರ್ಯೋತ್ಸವದ ವ್ಯವಸ್ಥಿತ ಆಚರಣೆಗೆ ರಚಿಸಲ್ಪಟ್ಟ ಸಮಿತಿಗಳು ಪರಸ್ಪರ ಸಮನ್ವಯ ಸಾಧಿಸಿ ತಮ್ಮ ಜಾವಾಬ್ದಾರಿಗಳನ್ನು ನಿರ್ವಹಿಸಬೇಕು. ಸೌಲಭ್ಯ ವಿತರಣೆ, ಸಾಧಕರಿಗೆ ಸನ್ಮಾನ ಹಾಗೂ ಇತರ ಕಾರ್ಯಕ್ರಮಗಳು ಇದ್ದಲ್ಲಿ ಅಂತಹ ಅಧಿಕಾ–ರಿಗಳು ಮುಂಚಿತವಾಗಿ ಜಿಲ್ಲಾಡಳಿತಕ್ಕೆ ಮತ್ತು ಸಂಬಂಧಪಟ್ಟ ಸಮಿತಿಗೆ ಮಾಹಿತಿ ನೀಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಜಗದೀಶ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕರಾದ ಸೋಮಶೇಖರಗೌಡ ಪಾಟೀಲ್, ಆಹಾರ ಇಲಾಖೆ ಉಪನಿರ್ದೇಶಕರಾದ ವಿಶ್ವನಾಥ–ಗೌಡ ಎಂ.ಎನ್., ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ವಿಠ್ಠಲ ಜಾಬಗೌಡರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾ–ರಿಗಳು, ತಹಸೀಲ್ದಾರರು, ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಲೇಖಕರ ದಿನಚರಿ...

# ನೆಲಮುಗಿಲು



ಸ್ವಾತಂತ್ರ್ಯಯದ ಕನಸು ಮತ್ತು ಕುಟುಂಬದ ಸಂಘರ್ಷದ ರಂಗರೂಪವೇ 'ನೆಲ ಮುಗಿಲು'

ತೆರೆ ಸರಿಯುವ ಮುನ್ನ... ಸ್ವಾತಂತ್ರ್ಯಯ ಹೋರಾಟದ ಹಿನ್ನೆಲೆಯ ಮೇಲೆ ಕನ್ನಡ ರಂಗಭೂಮಿಯಲ್ಲಿ ಅನೇಕ ನಾಟಕಗಳು ಮೂಡಿಬಂದಿವೆ. ಆದರೆ ದೇಶಪ್ರೇಮದ ತೀವ್ರತೆಯನ್ನು ಒಂದು ಕುಟುಂಬದೊಳಗಿನ ಸಿದ್ಧಾಂತ ಸಂಘರ್ಷದ ಮೂಲಕ ಅನಾವರಣಗೊಳಿಸುವ ನಾಟಕಗಳು ವಿರಳ. ಅಂತಹ ಅಪರೂಪದ ರಂಗಪ್ರಯೋಗಗಳಲ್ಲಿ ಪ್ರಮುಖವಾಗಿ ಗಮನ ಸೆಳೆಯುವ ಕೃತಿ "ನೆಲ ಮುಗಿಲು".

ರಂಗ ಆರಾಧನಾ ಸಾಂಸ್ಕೃತಿ-ಕ ಸಂಘಟನೆ (ರಿ), ಸವದತ್ತಿಯ ಕಲಾವಿದರ ಈ ನಾಟಕಕ್ಕೆ ಝುಕೀರ ನದಾಫ್ ಅವರ ರಚನೆ ಮತ್ತು ನಿರ್ದೇಶನವಿದ್ದು, ಇತಿಹಾಸ ಮತ್ತು ಕಲ್ಪನೆಯ ಸಮನ್ವಯದ ಮೂಲಕ ಸ್ವಾತಂತ್ರ?ಯ ಹೋರಾಟದ ಉತ್ಕಟತೆಯನ್ನು ಮನಮುಟ್ಟುವಂತೆ ಕಟ್ಟಿಕೊಡಲಾಗಿದೆ. ಇದು ಕೇವಲ ಇತಿಹಾಸದ ಪುನರಾವರ್ತನೆಯಲ್ಲ; ಸ್ವಾತಂತ್ರ್ಯದ ಬೆಲೆ, ತ್ಯಾಗದ ಮೌಲ್ಯ ಮತ್ತು ಕುಟುಂಬದ ಭಾವನಾತ್ಮಕ ಸಂಘರ್ಷದ ಜೀವಂತ ಚಿತ್ರಣವಾಗಿದೆ.

### ನಾಟಕದ ಆತ್ಮ

ಬ್ರಿಟೀಷರ ಆಳ್ವಿಕೆಯ ಕಾಲಘಟ್ಟದಲ್ಲಿ ನಡೆಯುವ ಈ ಕಥೆಯ ಕೇಂದ್ರವೆ ಇಬ್ಬರು ಸಹೋದರರು ವಿಭಿನ್ನ ನೆಲೆಗಳು. ಅಣ್ಣ ಬ್ರಿಟೀಷ್ ಸರ್ಕಾರದ ನಿಷ್ಠಾವಂತ ಗುಮಾಸ್ತನಾದ ಮಾಧವರಾಯ (ಕುಲಕರ್ಣಿ) ತಮ್ಮ ಮಹಾತ್ಮ ಗಾಂಧಿ ಅವರ ಆದರ್ಶಗಳಿಂದ ಪ್ರೇರಿತನಾದ ದೇಶಭಕ್ತ ಗೋವಿಂದರಾಯ. ಅಣ್ಣನಿಗೆ ಕುಟುಂಬದ ಸುರಕ್ಷತೆ, ಆಸ್ತಿ ಮತ್ತು ನೆಮ್ಮದಿಯ ಬದುಕಿನ ಕನಸು; ತಮ್ಮನಿಗೆ ದೇಶದ ಸ್ವಾತಂತ್ರ್ಯಕ್ಕಾಗಿ ಸರ್ವಸ್ವವನ್ನೇ ತ್ಯಜಿಸುವ ಸಂಕಲ್ಪ. ಈ ಎರಡು ವಿರುದ್ಧ ಸಿದ್ಧಾಂತಗಳ ಸಂಘರ್ಷವೇ ನಾಟಕದ ಆತ್ಮವಾಗಿದೆ.

### ಕಥೆಯ ಓಘ

ಮೊದಲ ದೃಶ್ಯದಲ್ಲಿಯೇ ಬ್ರಿಟಿಷರ ಪರವಾಗಿರುವ ಮಾಧವರಾಯನ ಮನಸ್ಥಿತಿಯನ್ನು ಹಾಗೂ ಗ್ರಾಮೀಣ ಜನರ ಸಂಕಷ್ಟಗಳನ್ನು ಪರಿಣಾಮಕಾ-ರಿಯಾಗಿ ಪರಿಚಯಿಸಲಾಗುತ್ತದೆ. ಕಲ್ಲಪ್ಪನ ಸಾಲದ ಪ್ರಸಂಗ ಕೇವಲ ವ್ಯಕ್ತಿಯ ಸಮಸ್ಯೆಯಾಗಿ ಉಳಿಯದೆ, ಆ ಕಾಲದ ಶೋಷಣೆ ಮತ್ತು ಸಾಮಾಜಿಕ ಅಸಮಾನತೆಯ ಪ್ರತೀಕವಾಗಿ ಮೂಡಿಬರುತ್ತದೆ. ಗೋವಿಂದರಾಯನ ಸಂಭಾಷಣೆಗಳಲ್ಲಿ ದೇಶಪ್ರೇಮ ಉಕ್ಕಿ ಹರಿಯುತ್ತದೆ. "ಈ ಮಣ್ಣು, ಈ ನೀರು, ಈ ಗಾಳಿ ನಮ್ಮದು" ಎಂಬ ಅವನ ದೃಢ ನಿಲುವು ಪ್ರೇಕ್ಷಕರ ಹೃದಯದಲ್ಲಿ ರಾಷ್ಟ್ರಾಭಿಮಾನವನ್ನು ಉಕ್ಕಿಸುತ್ತದೆ. ಅದಕ್ಕೆ ವಿರುದ್ಧವಾಗಿ ಬ್ರಿಟಿಷರ ಆಡಳಿತವೇ ದೇಶಕ್ಕೆ ಸ್ಥಿರತೆ ತಂದಿದೆ ಎಂದು ನಂಬುವ ಮಾಧವರಾಯನ ಮಾತುಗಳು ಅವನ ವ್ಯಕ್ತಿತ್ವದ



ಸಂಕೀರ್ಣತೆಯನ್ನು ಅನಾವರಣಗೊಳಿಸುತ್ತವೆ.

ಮಧ್ಯಂತರದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಸಭೆಗಳು, ಸತ್ಯಾಗ್ರಹದ ಚರ್ಚೆಗಳು, ಬ್ರಿಟಿಷರ ವಿರುದ್ಧದ ಕಾರ್ಯತಂತ್ರಗಳು ಮತ್ತು ದೇಶಭಕ್ತಿಯ ಉರಿಯುವ ವಾತಾವರಣವನ್ನು ನೈಜವಾಗಿ ಕಟ್ಟಿಕೊಡಲಾಗಿದೆ. ಗಾಂಧೀಜಿಯವರ ಅಹಿಂಸಾ ಮಾರ್ಗದ ಜೊತೆಗೆ ಹೋರಾಟದ ಉಗ್ರ ರೂಪಗಳ ಕುರಿತ ಚರ್ಚೆಗಳು ನಾಟಕಕ್ಕೆ ಮತ್ತಷ್ಟು ವೈಚಾರಿಕ ಆಳವನ್ನು ನೀಡುತ್ತವೆ. ಕೊನೆಯ ದೃಶ್ಯಗಳು ಮನಕಲಕುವಂತಿವೆ. ಬ್ರಿಟಿಷರ ಕುತಂತ್ರಕ್ಕೆ ಬಲಿಯಾಗಿ ಇಬ್ಬರು ಸಹೋದರರೂ ಸಾವನ್ನಪ್ಪುವ ಪ್ರಸಂಗ, ಅದನ್ನು ಕಂಡು ಲಲಿತಾಳ ಅಸಹಾಯಕ ಅಳಲು ಮತ್ತು ಕೊನೆಯಲ್ಲಿ ಹೊಸ ತಲೆಮಾರಿನ ಆಶಾಕಿರಣದೊಂದಿಗೆ ನಾಟಕ ಮುಕ್ತಾಯಗೊಳ್ಳುವುದು ಪ್ರೇಕ್ಷಕರ ಮನದಲ್ಲಿ ದೀರ್ಘಕಾಲ ಉಳಿಯುವ ಭಾವಾನುಭವವನ್ನು ಮೂಡಿಸುತ್ತದೆ.

### ರಂಗಸಜ್ಜಿಕೆ ಮತ್ತು ತಾಂತ್ರಿಕ ನಿರ್ವಹಣೆ

ಒಂದು ಸಾಮಾನ್ಯ ಮನೆ, ಬ್ರಿಟಿಷ್ ಕಾಲದ ಕಚೇರಿ ಹಾಗೂ ದೇವಾಲಯದಂತಹ ಸೀಮಿತ ರಂಗಸಜ್ಜಿಕೆಯನ್ನು ಅತ್ಯಂತ ಸಮಥ-ರ್ವಾಗಿ ಬಳಸಿಕೊಂಡು ನಿರ್ದೇಶಕರು ಕಥ-ೆಗೆ ಜೀವ ತುಂಬಿದ್ದಾರೆ. ದೃಶ್ಯ ಬದಲಾವಣೆಗಳು ಅಡೆತಡೆಯಿಲ್ಲದೆ ಸಾಗುವುದರಿಂದ ಕಥ-ೆಯ ನಿರಂತರತೆಗೆ ಧಕ್ಕೆಯಾಗಿಲ್ಲ. ಇದರಿಂದ ಪ್ರೇಕ್ಷಕರು ಕಥೆಯೊಳಗೆ ಸಂಪೂರ್ಣವಾಗಿ ಲೀನರಾಗುತ್ತಾರೆ. ಬೆಳಕು ಮತ್ತು ನೆರಳಿನ ವಿನ್ಯಾಸ ಭಾವತೀವ್ರತೆಯನ್ನು ಪರಿಣಾಮಕಾರಿಯಾಗಿ ಹೆಚ್ಚಿಸಿದೆ. ಕೆಲವು ಪ್ರಮುಖ ಸನ್ನಿವೇಶಗಳಲ್ಲಿ ಸ್ಪಾಟ್‌ಲೈಟ್ ಬಳಕೆಗೆ ಅವಕಾಶವಿದ್ದರೂ ಬಳಕೆಯಾಗಲಿಲ್ಲ ಎನ್ನುವ ಕೊರಗನ್ನು ಬಿಟ್ಟರೆ ಒಟ್ಟಾರೆ ಬೆಳಕಿನ ವಿನ್ಯಾಸ ನಾಟಕಕ್ಕೆ ಪೂರಕವಾಗಿದೆ.

### ಸಂಗೀತ- ನಾಟಕದ ಜೀವನಾಡಿ



ಹಿನ್ನೆಲೆ ಸಂಗೀತ ಮತ್ತು ಸಂದರ್ಭೋಚಿತ ಹಾಡುಗಳು ನಾಟಕದ ಭಾವಲೋಕವನ್ನು ಮತ್ತಷ್ಟು ಶ್ರೀಮಂತಗೊಳಿಸಿವೆ. "ಮುಕ್ತ ಮುಕ್ತ", "ಕುದಿವ ಕಡಲ", "ಇಂದು ಸೋಲು, ನಾಳೆ ಗೆಲುವು", "ನೆಲ ಮುಗಿಲು ಒಂದಾಗಲು ಹೇಗೆ ಸಾಧ್ಯ?" ಮೊದಲಾದ ಹಾಡುಗಳು ಕಥೆಯೊಂದಿಗೆ ಬೆರೆತು ದೇಶಭಕ್ತಿ ಮತ್ತು ಭಾವನಾತ್ಮಕತೆಯನ್ನು ಗಾಢಗೊಳಿಸುತ್ತವೆ.

### ಅಭಿನಯ ನಾಟಕದ ಬಲಿಷ್ಠ ಸ್ತಂಭ

ನಾಟಕದ ಯಶಸ್ಸಿನ ಪ್ರಮುಖ ಆಧಾರ ಅದರ ಕಲಾವಿದರ ಸಹಜ ಅಭಿನಯ. ಮಾಧವರಾಯ ಪಾತ್ರದಲ್ಲಿ ಗೋಪಾಲ ಘಾಸಲಕರ ಬ್ರಿಟಿಷ್ ಪರ ನಿಷ್ಠೆ ಮತ್ತು ಕುಟುಂಬದ ಮೇಲಿನ ಪ್ರೀತಿಯ ನಡುವಿನ ಆಂತರಿಕ ದ್ವಂದ್ವವನ್ನು ಪರಿಣಾಮಕಾ-ರಿಯಾಗಿ ಮೂಡಿಸಿದ್ದಾರೆ. ಗೋವಿಂದರಾಯ ಪಾತ್ರದಲ್ಲಿ ಶಿವಾನಂದ ತಾರಿಹಾಳ ನಾಟಕದ ಜೀವಾಳವಾಗಿದ್ದಾರೆ. ದೇಶಭಕ್ತಿಯ ಜ್ವಾಲೆ, ಚಳವಳಿಯ ಉತ್ಸಾಹ, ಗೆಳೆಯರೊಂದಿಗೆ ನಡೆಸುವ ಚರ್ಚೆಗಳು, ಬಂಧನದ ಕ್ಷಣಗಳು ಹಾಗೂ ಅಂತಿಮ ಸಾವಿನ ದೃಶ್ಯ-ಪ್ರತಿ ಹಂತದಲ್ಲೂ ಅವರು ಪಾತ್ರಕ್ಕೆ ಸಂಪೂರ್ಣ ನ್ಯಾಯ ಒದಗಿಸಿದ್ದಾರೆ. ಅವರ ಅಭಿನಯ ನಾಟಕದ ಅತ್ಯಂತ ದೊಡ್ಡ ಆಕರ್ಷಣೆ. ಲಲಿತಾ ಪಾತ್ರದಲ್ಲಿ ಸೀಮಾ ವನಕಿ

ಅವರ ಅಭಿನಯ ಹೃದಯಸ್ಪರ್ಶಿಯಾಗಿದೆ. ಪತಿ ಮತ್ತು ಮೈದುನನ ನಡುವಿನ ಸಿದ್ಧಾಂತ ಸಂಘರ್ಷದಲ್ಲಿ ನಲುಗುವ ಹೆಣ್ಣಿನ ಅಸಹಾಯಕತೆ, ನೋವು, ಮಮತೆ ಮತ್ತು ಮೌನ ವೇದನೆಯನ್ನು ಅವರು ಅತ್ಯಂತ ಸಹಜವಾಗಿ ಅಭಿವ್ಯಕ್ತಿಸಿದ್ದಾರೆ. ಅವರ ಹಾವಭಾವ ಮತ್ತು ಸಂಭಾಷಣೆಯ ನಿರೂಪಣೆ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗುತ್ತದೆ. ಕೇಶವರಾಯ (ಶ್ರೀನಿವಾಸ ಗದಗ), ಕಲ್ಲಪ್ಪ (ಕಾಶಪ್ಪ ಜಂಬುದ್ವೀಪ), ಫೌಜದಾರ (ಹೇಮಂತ ಕಾತ್ರಾಳ), ಸುಭಾನಿ (ನಾರಾಯಣ ಗೊಂಧಳಿ), ರುದ್ರಪ್ಪ (ಅಭಿಷೇಕ ಗೋರಬಾಳ), ಮಲ್ಲಪ್ಪ (ಲೋಹಿತ ಪೂಜಾರ), ಡಂಗೂರದವ (ಗಣೇಶ ಬಜೇರಿ), ಅಂಚೆಯವ (ಯಶವಂತ ಬಡಿಗೇರ), ಪೊಲೀಸ್ ಪಾತ್ರಗಳಲ್ಲಿ ಚಂದ್ರು ಪಠಾಣಿ ಮತ್ತು





ಶಶಿಧರ ಹಾಳಕೇರಿ ತಮ್ಮ ಪಾತ್ರಗಳಿಗೆ ಸಮರ್ಥ ನ್ಯಾಯ ಒದಗಿಸಿದ್ದಾರೆ.

### ತಾಂತ್ರಿಕ ತಂಡದ ಶ್ರಮ

ಹಿನ್ನೆಲೆ ಸಂಗೀತವನ್ನು ಕಾಶಪ್ಪ ಜಂಬುದ್ವೀಪ ಪರಿಣಾಮಕಾರಿಯಾಗಿ ನಿರ್ವಹಿಸಿದ್ದಾರೆ. ಅಶೋಕ ಜಾಧವ್ ಅವರ ಬೆಳಕಿನ ವಿನ್ಯಾಸ ಹಾಗೂ ನಿವೇದಿತಾ ಗೋರಬಾಳ ಅವರ ರಂಗ ನಿರ್ವಹಣೆ ನಾಟಕದ ದೃಶ್ಯ ವೈಭವವನ್ನು ಹೆಚ್ಚಿಸಿವೆ. ಇಡೀ ತಂಡವನ್ನು ಸಮರ್ಥವಾಗಿ ಮುನ್ನಡೆಸಿದ ಝುಕೀರ ನದಾಫ್ ಅವರ ರಚನೆ ಮತ್ತು ನಿರ್ದೇಶನ ನಾಟಕದ ಪ್ರಮುಖ ಯಶಸ್ಸಾಗಿದೆ.

### ಕೊನೆಯ ಮಾತು

"ನೆಲ ಮುಗಿಲು" ಕೇವಲ ಸ್ವಾತಂತ್ರ್ಯ ಹೋರಾಟದ ಕಥೆಯಲ್ಲ; ಅದು ಕುಟುಂಬ, ಸಿದ್ಧಾಂತ, ತ್ಯಾಗ, ದೇಶಪ್ರೇಮ ಮತ್ತು ಮಾನವೀಯ ಮೌಲ್ಯಗಳ ಸಮನ್ವಯ. ಭಿನ್ನಾಭಿಪ್ರಾಯಗಳ ನಡುವೆಯೂ ಭಾವೈಕ್ಯತೆ ಸಾಧ್ಯ ಎಂಬುದನ್ನು ಮನದಟ್ಟು ಮಾಡುವ ಈ ನಾಟಕ ಇಂದಿನ ಸಮಾಜಕ್ಕೂ ಪ್ರಸ್ತುತವಾದ ಸಂದೇಶವನ್ನು ಸಾರುತ್ತದೆ. ಸಂಗೀತ, ಅಭಿನಯ, ಸಂಭಾಷಣೆ, ರಂಗಸಜ್ಜಿಕೆ ಮತ್ತು ಕಥಾನಿರೂಪಣೆಯ ಸಮನ್ವಯದಿಂದ ಈ ನಾಟಕ ಆರಂಭದಿಂದ ಅಂತ್ಯದವರೆಗೆ ಪ್ರೇಕ್ಷಕರನ್ನು ಹಿಡಿದಿಟ್ಟುಕೊಳ್ಳುತ್ತದೆ.

ಬೆಳಕು ಮತ್ತು ದೃಶ್ಯ ವಿನ್ಯಾಸದಲ್ಲಿ ಇನ್ನಷ್ಟು ಕಲಾತ್ಮಕ ಪ್ರಯೋಗಗಳಿಗೆ ಅವಕಾಶವಿದ್ದರೂ, ಒಟ್ಟಾರೆಯಾಗಿ "ನೆಲ ಮುಗಿಲು" ಕನ್ನಡ ರಂಗಭೂಮಿಯ ಹೆಮ್ಮೆಯ ದೇಶಭಕ್ತಿಯ ರಂಗಕೃತಿಯಾಗಿ ಗುರುತಿಸಿಕೊಳ್ಳುವ ಎಲ್ಲ ಅರ್ಹತೆಗಳನ್ನು ಹೊಂದಿದೆ. ಈ ನಾಟಕ ಮುಗಿದ ಬಳಿಕವೂ ಅದರ ಪ್ರಶ್ನೆಗಳು, ಪಾತ್ರಗಳು ಮತ್ತು ಸಂದೇಶಗಳು ಪ್ರೇಕ್ಷಕರ ಮನಸ್ಸಿನಲ್ಲಿ ಬಹುಕಾಲ ಪ್ರತಿಧ್ವನಿಸುತ್ತಲೇ ಇರುತ್ತವೆ. ಇದು ಒಂದು ಉತ್ತಮ ರಂಗಕೃತಿಯ ನಿಜವಾದ ಯಶಸ್ಸು.

ಎ.ಎಂ.ಪಿ ವೀರೇಶಸ್ವಾಮಿ
ಹೊಳಗುಂದಿ 9008527708

# ಭಾರತ್ ಜೋಡೋ ಯುವ ಸಂಘಗಳ ನೋಂದಣಿಗೆ ಕ್ರಮ ವಹಿಸಿ: ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಸಶಕ್ತ ಯುವಜನತೆಯನ್ನು ಒಗ್ಗೂಡಿಸಿ, ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ ನೀಡಿ, ಜಾಗೃತ ನಾಗರಿಕರಿಂದ ಕೂಡಿದ ವಿಕಾಸಶೀಲ, ಸೌಹಾರ್ದಯುತ ಮತ್ತು ಬಲಿಷ್ಠ ರಾಷ್ಟ್ರ ನಿರ್ಮಾಣ-ಕ್ಕೆ ಶ್ರಮಿಸುವುದು 'ಭಾರತ್ ಜೋಡೋ ಯುವ ಸಂಘ'ದ ಮುಖ್ಯ ಉದ್ದೇಶವಾಗಿದೆ. ಸರ್ಕಾರದ ಆದೇಶದಂತೆ ಕೊಪ್ಪಳ ಜಿಲ್ಲೆಯಲ್ಲಿ 16 ರಿಂದ 35 ವಯೋಮಾನದವರನ್ನು ಭಾರತ್ ಜೋಡೋ ಯುವ ಸಂಘಕ್ಕೆ ನೋಂದಣಿ ಮಾಡಿಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಸುರೇಶ್ ಬಿ. ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚಿಸಿದರು.**

ಅವರು ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಭಾರತ್ ಜೋಡೋ ಯುವ ಸಂಘದ ಸ್ಥಾಪನೆಗೆ ಸಂಬಂಧಿಸಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಯುವಕರಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸುವುದು ಈ ಕಾರ್ಯಕ್ರಮದ ಮೂಲ ಉದ್ದೇಶವಾಗಿದ್ದು, ಯುವ ಜನರಲ್ಲಿ ಕ್ರೀಡೆ, ಸಂಸ್ಕೃತಿ, ವೈಜ್ಞಾನಿಕ ಮನೋಭಾವ, ಸಾಮರಸ್ಯವನ್ನು ಉತ್ತೇಜಿಸಲು ಗ್ರಾಮ ಪಂಚಾಯತ್ ಮತ್ತು ನಗರ ವಾರ್ಡುಗಳ ವ್ಯಾಪ್ತಿಯಲ್ಲಿ ಅಂದಾಜು 10,000 ಭಾರತ್ ಜೋಡೋ ಯುವ ಸಂಘಗಳನ್ನು ಸ್ಥಾಪಿಸಬೇಕಿದೆ.

ಯುವಜನರನ್ನು ಸಬಲೀಕರಣಗೊಳಿಸಿ



ಸಮುದಾಯ ಅಭಿವೃದ್ಧಿ, ಸಾಮಾಜಿಕ ಸ್ವಾಸ್ಥ್ಯ ಯ ಮತ್ತು ತಳಮಟ್ಟದ ಆಡಳಿತದಲ್ಲಿ ಸಕ್ರಿಯ ಪಾಲುದಾರರನ್ನಾಗಿ ಮಾಡಬೇಕಾಗಿದೆ. ಭಾರತ್ ಜೋಡೋ ಸಂಘದಿಂದ ಮುಖ್ಯವಾಗಿ ಗ್ರಾಮೀಣ ನಗರದ ಯುವಜನತೆಯಲ್ಲಿ ಕ್ರೀಡೆ, ಫಿಟ್ನೆಸ್, ಆರೋಗ್ಯಕರ ಜೀವನ ಶೈಲಿ ಮತ್ತು ನಾಯಕತ್ವದ ಅವಕಾಶಗಳಲ್ಲಿನ ಅಡೆತಡೆಗಳನ್ನು ನಿವಾ-ರಿಸಬಹುದಾಗಿದೆ. ಪ್ರತಿ ಗ್ರಾಮ ಪಂಚಾಯಿತಿ ಮತ್ತು ನಗರ, ವಾರ್ಡ್ ಒಂದರಲ್ಲಿ ಸಾಂಸ್ಥಿಕ ವೇದಿಕೆ ನಿರ್ಮಿಸಿ ನಾಯಕತ್ವ ಜವಾಬ್ದಾರಿ ಮತ್ತು ನಾಗರಿಕ ಪ್ರಜ್ಞೆಯನ್ನು ಬೆಳೆಸುವುದರ ಜೊತೆಗೆ ಒಂದುಗೂಡಿಸುವ ಉದ್ದೇಶ ಹೊಂದಿದೆ.

ಆದ್ದರಿಂದ ಯುವ ಸಂಘಗಳನ್ನು ಸ್ಥಾಪಿಸಿ, ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ನೋಂದಣಿ ಆಗುವಂತೆ ಸಂಬಂಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು. ಭಾರತ್ ಜೋಡೋ ಯುವ ಸಂಘ ಸ್ಥಾಪಿಸಲು ಜಿಲ್ಲೆಯ ಅಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕಿನ ತಹಶೀಲ್ದಾರರು, ತಾಲ್ಲೂಕು ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾ-ರಿಗಳು ಸೂಕ್ತ ಕ್ರಮ ವಹಿಸಿ ಸಂಘ ಸ್ಥಾಪಿಸಬೇಕು. ಯೋಜನೆಯ ಮಾರ್ಗಸೂಚಿಗಳ ಪ್ರಕಾರ, ಸಂಘದ ಸದಸ್ಯರು ತಾವು ನೋಂದಾಯಿಸಿಕೊಳ್ಳುವ ಗ್ರಾಮ ಪಂಚಾಯಿತಿ ಅಥವಾ ವಾರ್ಡ್ನ ಸಾಮಾನ್ಯ ನಿವಾಸಿ ಆಗಿರಬೇಕು. ಪ್ರತಿಯೊಬ್ಬ ಸದಸ್ಯರು ಒಂದು ಸಂಘಕ್ಕೆ ಮಾತ್ರ ಸದಸ್ಯರಾಗಲು ಅವಕಾಶವಿದ್ದು, ಸಂಘದ ಸದಸ್ಯರು ತಮ್ಮೊಳಗಿಂದಲೇ ಕಾರ್ಯಕಾರಿ ಸಮಿತಿಯನ್ನು ಆಯ್ಕೆ ಮಾಡಿಕೊಳ್ಳಬೇಕು.

ಆಗಸ್ಟ್ 6ರಂದು ಮಾನ್ಯ ಉಪ ಮುಖ್ಯಮಂತ್ರಿಗಳು ಬಿಜೆವೈಎಸ್ ಮೊಬೈಲ್ ಆಪ್ ಹಾಗೂ ವೆಬ್‌ಸೈಟ್ ಅನ್ನು ಉದ್ಘಾಟಿಸಲಿದ್ದು, ಆಗಸ್ಟ್ ಎರಡನೇ ವಾರದಲ್ಲಿ ಮಾನ್ಯ ಮುಖ್ಯಮಂತ್ರಿಗಳು ರಾಜ್ಯಾದ್ಯಂತ ಭಾರತ್ ಜೋಡೋ ಯುವ ಸಂಘಗಳಿಗೆ ಅಧಿಕೃತ ಚಾಲನೆ ನೀಡಲಿದ್ದಾರೆ. ನಂತರ ನೋಂದಣಿ ಪೂರ್ಣಗೊಂಡ ಬಳಿಕ ಪ್ರತಿಯೊಬ್ಬ ಸದಸ್ಯರಿಗೂ ಯೂನಿಕ್ ಐಡಿ ಕಾರ್ಡ್ ನೀಡಲಾಗುತ್ತದೆ ಎಂದು ಅವರು ಹೇಳಿದರು. ಪ್ರತಿ ಸಂಘಕ್ಕೆ ಸರ್ಕಾರದಿಂದ ಒಬ್ಬ ಮಾರ್ಗದರ್ಶಕರನ್ನು (ಮೆಂಟರ್) ನೇಮಕ ಮಾಡಲಾಗುತ್ತದೆ. ಅಲ್ಲದೆ, ನೋಂದಾಯಿತ ಸಂಘಗಳಿಗೆ ವಿವಿಧ ಹಂತಗಳಲ್ಲಿ ಒಟ್ಟು ರೂ.10 ಲಕ್ಷದವರೆಗೆ ಅನುದಾನ ನೀಡಲಾಗುವುದು.

ಗ್ರಾಮ ಪಂಚಾಯತಿಗೆ ಒಂದು ಸಂಘ, ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ 4,000 ಸಾವಿರ ಜನಸಂಖ್ಯೆಗೆ ಒಂದು ಸಂಘ, ಪುರಸಭೆ ವ್ಯಾಪ್ತಿಯಲ್ಲಿ 6,000 ಜನಸಂಖ್ಯೆಗೆ ಒಂದು ಸಂಘ, ನಗರಸಭೆ ವ್ಯಾಪ್ತಿಯಲ್ಲಿ 8,000 ಜನಸಂಖ್ಯೆಗೆ ಒಂದು ಸಂಘದಂತೆ ಜಿಲ್ಲೆಯಲ್ಲಿ ಒಟ್ಟು 214 ಸಂಘಗಳು ಸ್ಥಾಪಿಸಬೇಕು. ಸಮಿತಿ ರಚನೆ ಮಾಡುವಲ್ಲಿ ಪ್ರತಿ ಸಮಿತಿಗೆ ಒಬ್ಬರು ಮಹಿಳೆಯರು ಕಡ್ಡಾಯವಾಗಿ ಇರಬೇಕು ಹಾಗೂ ಸಂಘದ ಕಾರ್ಯಕಾರಿ ಸಮಿತಿಯು ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳನ್ನು ಸಮವಾಗಿ ಪ್ರತಿನಿಧಿಸುವುದು ಹಾಗೂ ಪ್ರತಿ ಭಾರತ್ ಜೋಡೋ ಯುವ ಸಂಘದ ಪಾದಾಧಿಕಾರಿಗಳಲ್ಲಿ ಮತ್ತು ಅದರ ಸದಸ್ಯರಲ್ಲಿ ಆಯಾ ವ್ಯಾಪ್ತಿಯಲ್ಲಿ ವಾಸವಿರುವ ಎಲ್ಲಾ ಜಾತಿಯವರನ್ನು ಕಡ್ಡಾಯವಾಗಿ ಒಳಗೊಂಡಿರಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಸಂಘದ ಕುರಿತು ವಿಷಯಗಳನ್ನು ಚರ್ಚಿಸಲು ಆಯಾ ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಸ್ಥಳಾವಕಾಶ ಇರುತ್ತದೆ.

ನಗರ ಪ್ರದೇಶದಲ್ಲಿ ಸ್ಥಳೀಯ ಶಾಲೆ, ಕಾಲೇಜು, ಸಮುದಾಯ ಭವನ ಅಥ-'ವಾ ಯಾವುದಾದರೂ ಸರ್ಕಾರಿ ಕಟ್ಟಡದಲ್ಲಿ ಸೂಕ್ತ ವಿಸ್ತೀರ್ಣದ ಒಂದು ಕೊಠಡಿಯನ್ನು ಒದಗಿಸಲು ಅಧಿಕಾರಿಗಳಿಗೆ ತಿಳಿಸಿದರು. ನೋಂದಾಯಿತ ಸಂಘವು ವಿಪತ್ತು ನಿರ್ವಹಣೆ ಮತ್ತು ಪರಿಹಾರ, ಜಲ ಸಂರಕ್ಷಣೆ ಚಟುವಟಿಕೆಗಳು, ತ್ಯಾಜ್ಯ ನಿರ್ವಹಣೆ ಉಪಕ್ರಮಗಳು, ಗ್ರಾಹಕ ಜಾಗೃತಿ ಅಭಿಯಾನಗಳು, ಸೈಬರ್ ಸುರಕ್ಷತೆ ಜಾಗೃತಿ, ಸಂಚಾರ ಜಾಗೃತಿ ಅಭಿಯಾನಗಳು, ಕೃಷಿ ಮತ್ತು ಗ್ರಾಮೀಣ ನಾವೀನ್ಯತೆ ಇತ್ಯಾದಿ ಸಮುದಾಯ ಫಲಾನುಭವಿ ಕಾರ್ಯಕ್ರಮಗಳು, ಧೂಮಪಾನ, ಮದ್ಯಪಾನ, ಡ್ರಗ್ಸ್ ವಿರುದ್ಧ ಚಟುವಟಿ-ಕೆಗಳನ್ನು ಕೈಗೊಳ್ಳಬೇಕು. ಪ್ರತಿಯೊಂದು ಸಂಘವು ವಾರ್ಷಿಕ ಚಟುವಟಿಕೆಗಳ ಕ್ಯಾಲೆಂಡರ್ ತಯಾರಿಸಿ ಪ್ರತಿಯೊಂದು ಚಟುವಟಿಕೆಯ ವರದಿಯನ್ನು ಜಿಯೋ ಟ್ಯಾಗ್ ಮಾಡಿದ ಫೋಟೋಗಳೊಂದಿಗೆ ಬಿಜೆವೈಎಸ್ ಸಾಫ್ಟ್ವೇರ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸಂಘದ ಕಾರ್ಯಚಟುವಟಿಕೆ ಬಗ್ಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಆಹಾರ ಮತ್ತು ನಾಗರಿಕರ ಸರಬರಾಜು ಇಲಾಖೆಯ ಉಪನಿರ್ದೇಶಕ ವಿಶ್ವನಾಥ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವಿಠ್ಠಲ ಜಾಬಗೌಡರ್, ಕೊಪ್ಪಳ ತಹಶೀಲ್ದಾರ ಬಸವರಾಜ ತೆನ್ನಳ್ಳಿ, ಡಿಡಿಪಿಐ ಸೋಮಶೇಖರ ಗೌಡ, ಡಿಡಿಪಿಯು ಜಗದೀಶ್ ಜಿ. ಎಚ್., ಮಹಿಳಾ ಮತ್ತು ಮಕ್ಕಳು ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಮರೇಶ್ ಹಾವಿನ, ಸೇ-ರಿದಂತೆ ಎಲ್ಲಾ ತಾಲ್ಲೂಕಿನ ತಹಶೀಲ್ದಾರರು ಮತ್ತು ತಾಲ್ಲೂಕು ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

## ಆಗಸ್ಟ್ 5 ರಂದು ಜಿಲ್ಲಾ ಮಟ್ಟದ ಜಾಥಾ ಮತ್ತು ಹದಿಹರೆಯದ ಹೆಣ್ಣುಮಕ್ಕಳ ಸಮಾವೇಶ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಬಳ್ಳಾರಿ ರೀಡ್ಸ್ ಸಂಸ್ಥೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕೊಪ್ಪಳ, ಮಕ್ಕಳ ವಿಶೇಷ ಪೊಲೀಸ್ ಘಟಕ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಇವರುಗಳ ಸಂಯುಕ್ತಾಶ್ರಯದಲ್ಲಿ ಬಾಲ್ಯವಿವಾಹ ನಿಷೇಧ, ಪೋಕ್ಸೋ, ಸೈಬರ್ ಕ್ರೈಂ, ಮಾದಕ ದ್ರವ್ಯ ಮುಕ್ತ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆ ಕುರಿತು ಜಿಲ್ಲಾಮಟ್ಟದ ಜಾಥಾ ಮತ್ತು ಹದಿಹರೆಯದ ಹೆಣ್ಣುಮಕ್ಕಳ ಸಮಾವೇಶವನ್ನು ಆಗಸ್ಟ್ 5 ರಂದು ಹಮ್ಮಿಕೊಳ್ಳಲಾಗಿದೆ.**

ಜಾಥಾ ಕಾರ್ಯಕ್ರಮದ ಉದ್ಘಾಟನೆಯನ್ನು ಆಗಸ್ಟ್ 5 ರಂದು ಬೆಳಿಗ್ಗೆ 10.30 ಗಂಟೆಗೆ ಕೊಪ್ಪಳದ ಎಸ್. ಪಿ. ಕಛೇ-ರಿಯಲ್ಲಿ ಆಯೋಜಿಸಿದ್ದು, ಸಮಾವೇಶವನ್ನು ಕೊಪ್ಪಳ ತಾಲೂಕು ಪಂಚಾಯತಿ ಎದುರಿನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ. ಜಾಥಾ ಹಾಗೂ ಸಮಾವೇಶದ ಉದ್ಘಾಟನೆಯನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ರಾಮ್ ಎಲ್. ಅರಸಿದ್ದಿ ಅವರು ನೆರವೇರಿಸುವರು. ಅಧ್ಯಕ್ಷತೆಯನ್ನು ಬಳ್ಳಾರಿ ರೀಡ್ಸ್ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕರಾದ ಸಿ ತಿಪ್ಪೇಶಪ್ಪ ಅವರು ವಹಿಸಿಕೊಳ್ಳುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಆರ್ ಹೇಮಂತ್ ಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಅಮರೇಶ್ ಹಾವಿನ್, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಪ್ರಕಾಶ್ ಶಿವಪ್ಪ ಕಡಗದ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿಗಳಾದ ಸಿಂಧು ಅಂಗಡಿ, ಜಿಲ್ಲಾ ಪೊಲೀಸ್ ಸೈಬರ್ ಕ್ರೈಂ ಡಿ.ವೈ.ಎಸ್.ಪಿ ಗಳಾದ ಸಿದ್ದಲಿಂಗಪ್ಪಗೌಡ ಪಾಟೀಲ್, (ಪದವಿ ಪೂರ್ವ) ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಜಿ.ಎಚ್ ಜಗದೀಶ್, ಸೈಬರ್ ಕ್ರೈಂ ಸರ್ಕಲ್ ಇನ್ಸ್ಪೆಕ್ಟರ್ ಡಿ.ಎಸ್.ಆಂಜನೇಯ ಅವರು ಆಗಮಿಸುವರು. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯರಾದ ಡಾ. ಹೆಚ್.ಸಿ ರಾಘವೇಂದ್ರ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸುವರು ಎಂದು ಪ್ರಕಟಣೆ ತಿಳಿಸಿದೆ.

# ತಮಿಳುನಾಡಿಗೆ ನೀರು ಹರಿಸದಂತೆ ಕ.ರ.ವೇ ಪ್ರತಿಭಟನೆ

ಅ.ಶ. ಸುದ್ದಿ ಚಿಕ್ಕಬಳ್ಳಾಪುರ

**ಚಿಕ್ಕಬಳ್ಳಾಪುರ: ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯು ಆರ್ ಸಿ) ಸಭೆಯಲ್ಲಿ ತಮಿಳುನಾಡಿಗೆ ನೀರು ಹರಿಸುವ ಆದೇಶ ಖಂಡಿಸಿ, ತಮಿಳುನಾಡಿಗೆ ನೀರು ಹರಿಸದಂತೆ ಕರ್ನಾಟಕ ರಕ್ಷಣಾ ವೇದಿಕೆ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ ಜಿಲ್ಲಾಡಳಿತ ಭವನದ ಮುಂದೆ ಸೋಮವಾರ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾ-ರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.**

ಈ ವೇಳೆ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯ ಉಪಾಧ್ಯಕ್ಷ ಡಾ.ಆನಂದ್ ಅನು ಮಾತನಾಡಿ, ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆ ಕಡಿಮೆಯಾಗಿದೆ.ಕುಡಿಯುವ ನೀರಿಗೆ ಸಂಕಷ್ಟ ಎದುರಾಗಿದೆ.ರಾಜ್ಯದಲ್ಲಿ ಮಳೆ ಪ್ರಮಾಣ ವಾಡಿಕೆಗಿಂತ ಶೇ 65.86 ರಷ್ಟು ಕೊರತೆಯಾಗಿದ್ದು, ಕಾವೇರಿ ನದಿ ಪಾತ್ರ ಜಲಾಶಯಗಳಲ್ಲಿ 46 ಟಿಎಂಸಿ ಅಡಿಯಷ್ಟು ಮಾತ್ರ ನೀರಿದೆ. 10 ಜಿಲ್ಲೆಗಳ ಕುಡಿಯುವ ನೀರಿನ ಉದ್ದೇಶಕ್ಕೆ 12 ಟಿಎಂಸಿ ಅಡಿ ನೀರಿನ ಅಗತ್ಯವಿದೆ. ಮುಖ್ಯವಾಗಿ ರಾಜ್ಯದಲ್ಲಿ




ಈ ವೇಳೆಗೆ ಶೇ 70ರಷ್ಟು ಮಳೆಯಾಗಬೇಕಿತ್ತು. ಬದಲಾಗಿ ಕೇವಲ ಶೇ20 ರಷ್ಟು ಮಾತ್ರ ಮಳೆಯಾಗಿದೆ.ಕಾವೇರಿ ನಮ್ಮದು- ಕಾವೇರಿ ನದಿಯ ನೀರನ್ನು ಎರಡು ವಾರಗಳ ಕಾಲ ತಮಿಳುನಾಡಿಗೆ ಪ್ರತಿದಿನ 3.500 ಕ್ಯೂಸೆಕ್ಸ್ ಪ್ರಮಾಣದಲ್ಲಿ ಹ-ರಿಸುವಂತೆ ಕಾವೇರಿ ನಿಯಂತ್ರಣ ಸಮಿತಿಯ ಆದ-'ೇಶವನ್ನು ತೀವ್ರವಾಗಿ ಖಂಡಿಸುತ್ತವೆ.ಮುಂಗಾರು ಮಳೆಯ ಕೊರತೆ ಇರುವುದರಿಂದ ತಮಿಳುನಾಡಿಗೆ ನೀರು ಬಿಡಲು ಯಾವುದೇ ಕಾರಣಕ್ಕೂ ಸಾಧ್ಯವಿಲ್ಲ. ಅದ್ದರಿಂದ ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರು ಬಿಡಬಾರದು. ನಮಗೆ ನೀರು ಇಲ್ಲದಿರುವುದರಿಂದ ಹೇಗೆ ತಮಿಳುನಾಡಿಗೆ ಬಿಡಲು ಸಾಧ್ಯ. ನೀರು ಬಿಟ್ಟರೇ ಬೀದಿಗಿಳಿದು ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಬಾಜಾನ್ ಮಾತನಾಡಿ,ರಾಜ್ಯದಲ್ಲಿ ಕುಡಿಯುವ ನೀರು ಹಾಗೂ ಕೃಷಿಗೆ ಅಗತ್ಯವಿರುವ ನೀರಿನ ಕೊರತೆ ಎದುರಾಗಿರುವ ಸಂದರ್ಭದಲ್ಲಿ ತಮಿಳುನಾಡಿಗೆ ನೀರು ಬಿಡುಗಡೆ ಮಾಡಲು ಆದೇಶಿಸಿರುವ ಕಾವೇರಿ ನೀರು ನಿಯಂತ್ರಣ ಸಮಿತಿ ಕ್ರಮ ಖಂಡನೀಯ . ರಾಜ್ಯ ಸರ್ಕಾರವು ರೈತರ ಹಿತಾಸಕ್ತಿಯನ್ನು ಕಾಪಾಡಬೇಕು. ರಾಜ್ಯದ ನೀರಿನ ಸಂಪನ್ಮೂಲಗಳ ಬಳಕೆಯಲ್ಲಿ ಸರ್ಕಾರ ಎಚ್ಚರಿಕೆ ವಹಿಸಬೇಕು. ಕಾವೇರಿ ನೀರು ಬಿಡುಗಡೆ ಆದೇಶವನ್ನು ಮರುಪರಿಶೀಲಿಸಿ ರಾಜ್ಯದ ಹಿತವನ್ನು ಕಾಪಾಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯ ನಂತರ ಪ್ರತಿಭಟನಾಕಾರರು ಜಿಲ್ಲಾಧಿಕಾರಿ ಪ್ರಭು .ಜಿ ರವರ ಮುಖಾಂತರ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರಿಗೆ ಮನವಿ ಪತ್ರವನ್ನು ಸಲ್ಲಿಸಿದರು. ಪ್ರತಿಭಟನೆಯಲ್ಲಿ ಕರವೇ ಬೆಂಗಳೂರು ನಗರ ಅಧ್ಯಕ್ಷ ಮಂಜುನಾಥ್, ಚಿಕ್ಕಬಳ್ಳಾಪುರ ತಾಲೂಕು ಅಧ್ಯಕ್ಷ ಸುದೀಪ್ ರೆಡ್ಡಿ, ಮಹಿಳಾ ಜಿಲ್ಲಾಧ್ಯಕ್ಷೆ ಅಂಬಿಕ,ಪಧಾಧಿಕಾ-ರಿಗಳಾದ ನವೀನ್, ಬಿ.ವಿ.ಆನಂದ್,ರವೀಂದ್ರ, ಬಿ.ಮುನಿಸ್ವಾಮಿ, ಮತ್ತಿತರರು ಇದ್ದರು.

# ಡಾ. ಸಂಗನಬಸಪ್ಪ ಬಿರಾದಾರ್ ಅವರಿಗೆ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿಗಳಿಂದ ಸನ್ಮಾನ



ಅ.ಶ. ಸುದ್ದಿ ಪೀಣ್ಯ ದಾಸರಹಳ್ಳಿ

**ಪೀಣ್ಯ ದಾಸರಹಳ್ಳಿ: ಬೆಂಗಳೂರಿನ ನಿರ್ಮಾತೃ ನಾಡಪ್ರಭು ಕೆಂಪೇಗೌಡರ 517ನೇ ಜಯಂತ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಸಮಾರಂಭದಲ್ಲಿ ಚಿಂತಕರು, ವಾಗ್ಮಿಗಳು, ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಪ್ರಶಸ್ತಿಗಳ ಪುರಸ್ಕೃತರು ಮತ್ತು ಜನಪ್ರಿಯ ಸಮಾಜಸೇವಕರಾದ ಡಾ. ಸಂಗನಬಸಪ್ಪ ಬಿರಾದಾರ್ ಅವರನ್ನು ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ಸನ್ಮಾನಿಸಿ ಗೌರವಿಸಿದರು.**

ನಾಡಪ್ರಭು ಕಂಚಿನ ಕೆಂಪೇಗೌಡರ ಸಾಂಸ್ಕೃತಿಕ ವೇದಿಕೆ ಹಾಗೂ ಯಶವಂತಪುರ ಕ್ಷೇತ್ರ ಒಕ್ಕಲಿಗರ ವೇದಿಕೆ ಸಂಂ-ಯುಕ್ತವಾಗಿ ಆಯೋಜಿಸಿದ್ದ ಕಾರ್ಯಕ್ರಮವು ಯಶವಂತಪುರ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವ ಎಸ್.ಟಿ. ಸೋಮಶೇಖರ್ ಗೌಡ ಅವರ ಅಧ್ಯಕ್ಷತೆಯಲ್ಲಿ, ಬೃಂದಾವನ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಅರುಣ್ ಬೈಲಪ್ಪ ಅವರ ನೇತೃತ್ವದಲ್ಲಿ ಪೀಣ್ಯ 2ನೇ ಹಂತದ ಅಂ-ದ್ರಹಳ್ಳಿ ಮುಖ್ಯರಸ್ತೆಯ ವಿನಾಯಕನಗರದ ಕೆಂಪೇಗೌಡ ಸರ್ಕಲ್‌ನಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ನಾಡಪ್ರಭು ಕೆಂಪೇಗೌಡರ ಕಂಚಿನ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿದ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ಮಾತನಾಡಿ, "ತಾನು ಕರಗಿ ಮರವಾಗುವ ಬೀಜವನ್ನು ಯಾವತ್ತೂ ಮರೆಯಬಾರದು.

ಅದೇ ರೀತಿ ಕೆಂಪೇಗೌಡರು ಬೆಂಗಳೂರಿಗಾಗಿ ಮಾಡಿದ ತ್ಯಾಗ ಮತ್ತು ದೂರದೃಷ್ಟಿಯ ಯೋಜನೆಗಳನ್ನು ಮುಂದಿನ ಪೀಳಿಗೆ ಸದಾ ಸ್ಮರಿಸಬೇಕು. ಇಂದು ವಿದೇಶಗಳಲ್ಲಿ 'ನಾವು ಬೆಂಗಳೂರಿನಿಂದ ಬಂದಿದ್ದೇವೆ' ಎಂದರೆ ಭಾರತವನ್ನು ನೆನಪಿಸಿಕೊಳ್ಳುವಷ್ಟು ಮಟ್ಟಿಗೆ ಬೆಂಗಳೂರು ವಿಶ್ವವಿಖ್ಯಾತಿಯಾಗಿರುವುದಕ್ಕೆ ನಾಡಪ್ರಭು ಕೆಂಪೇಗೌಡರ ದೂರದೃಷ್ಟಿಯೇ ಪ್ರಮುಖ ಕಾರಣವಾಗಿದೆ" ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿದ ಬಳಿಕ ಮಾತನಾಡಿದ ಡಾ. ಸಂಗನಬಸಪ್ಪ ಬಿರಾದಾರ್, "ಕೆಂಪೇಗೌಡರು ಕೇವಲ ಒಂದು ನಗರವನ್ನು ನಿರ್ಮಿಸಲಿಲ್ಲ; ಉತ್ತಮ ಆಡಳಿತ, ಸಾಮಾಜಿಕ ಸಾಮರಸ್ಯ, ಕೃಷಿ, ವ್ಯಾಪಾರ ಹಾಗೂ ಜನಕಲ್ಯಾಣಕ್ಕೆ ಹೊಸ ದಿಕ್ಕನ್ನು ತೋರಿದ ಮಹಾನ್ ನಾಯಕರು.

ಅವರ ದೂರದೃಷ್ಟಿಯ ಫಲವಾಗಿ ಇಂದು ಬೆಂಗಳೂರು ಜಾಗತಿಕ ಮಟ್ಟದಲ್ಲಿ ಹೆಸರು ಪಡೆದ ಮಹಾನಗರವಾಗಿ ಬೆಳೆದಿದೆ. ಅಧಿಕಾರವೆಂದರೆ ವೈಯಕ್ತಿಕ ಲಾಭಕ್ಕಾಗಿ ಅಲ್ಲ, ಜನರ ಅಭಿವೃದ್ಧಿಗಾಗಿ ಎಂಬ ಆದ-'ರ್ಶವನ್ನು ಅವರು ತಮ್ಮ ಬದುಕಿನ ಮೂಲಕ ಸಾರಿದ್ದಾರೆ" ಎಂದು ಹೇಳಿದರು. ಈ ಸಂದರ್ಭದಲ್ಲಿ ಅರ್ಪಿತಾ ಸೇವಾ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಲಗ್ಗೆರೆ ನಾರಾಯಣಸ್ವಾಮಿ, ಖ್ಯಾತ ಚಲನಚಿತ್ರ ನಿರ್ದೇಶಕ ಸಿಂಪಲ್ ಸುನಿ, ಅಂ-ದ್ರಹಳ್ಳಿ ವಾರ್ಡ್ ಕಾಂಗ್ರೆಸ್ ಆಕಾಂಕ್ಷಿ ಅಭ್ಯರ್ಥಿ ವಿ. ನಾಗರಾಜ್, ರವಿಕುಮಾರ್, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಗಣ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## 'ವಚನಾಮೃತ'

ಮಜ್ಜಿಗೆಯೊಳ್ ಕಡಗೋಲಾಡಿಸಿದೊಡೆ
ಬೆಡಗಿನ ಬೆಣ್ಣೆ ಬಪ್ಪಂತೆ ಮನವಂ ಆಡಿಸಿ
ಕಡೆದು ನೋಡಾ!.
ಕಡೆಯದೆ ಧೃಡವಾಗದಯ್ಯ
ಮುಸುಕ್ಮಾಯೆಯೊಳ್ ಹೊದ್ದು ಮೆದ್ದ
ಮನಜ್ವಾಲೆ ತಿಳಿಮಂಕೆ ಸತ್ಯವಾಣಿ!!.



ವಾಣಿ ಭಂಡಾರಿ.

## ಕುಷ್ಟಗಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ: ಖಾಲಿ ಇರುವ ಶುಶ್ರೂಷಾಧಿಕಾರಿಗಳ ಹುದ್ದೆಗಳಿಗೆ ಅರ್ಜಿ ಆಹ್ವಾನ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಕುಷ್ಟಗಿಯ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಖಾಲಿ ಇರುವ 12 ಶುಶ್ರೂಷಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧ-ಾರದ ಮೇಲೆ ಒಂದು ವರ್ಷದ ಅವಧಿಗೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

ಎರಡು ವರ್ಷಗಳ ಸೇವಾ ಅನುಭವ ಇರುವ ಅರ್ಹ ಆಸಕ್ತ ಅಭ್ಯರ್ಥಿಗಳು www.koppal.nic.in ಜಿಲ್ಲಾ ವೆಬ್ ಸೈಟ್ ನಲ್ಲಿ ಅರ್ಜಿ ನಮೂನೆಯನ್ನು ಪಡೆದುಕೊಂಡು ಭರ್ತಿ ಮಾಡಿ, ತಿಳಿಸಿರುವ ಸ್ಥಳಗಳಲ್ಲಿ ಸಂಬಂಧಿಸಿದ ಅಗತ್ಯ ಮೂಲ ದಾಖಲೆಗಳನ್ನು ಹಾಗೂ ಎರಡು ಸ್ವಯಂ ದೃಢೀಕೃತ ನಕಲು ಪ್ರತಿಗಳೊಂದಿಗೆ ಆಗಸ್ಟ್ 7 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯೊಳಗಾಗಿ ನೇರ ಸಂದರ್ಶನಕ್ಕೆ ಅಭ್ಯರ್ಥಿಗಳು ಖುದ್ದಾಗಿ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವೆಬ್‌ಸೈಟ್ ಅನ್ನು ವೀಕ್ಷಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ತನ್ಯಪಾನ ಪ್ರಕೃತಿಯ ಮೊದಲ ಲಸಿಕೆ : ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ

ಅ.ಶ. ಸುದ್ದಿ ಚಿತ್ರದುರ್ಗ

**ಚಿತ್ರದುರ್ಗ: ಮಗು ಜನಿಸಿದ ಒಂದು ಗಂಟೆಯ ಒಳಗಾಗಿ ಸ್ತನ್ಯಪಾನ ಪ್ರಾರಂಭಿಸುವುದರಿಂದ ಶಿಶು ಮರಣ ಪ್ರಮಾಣವನ್ನು ಗಣನೀಯವಾಗಿ ತಗ್ಗಿಸಬಹುದು. ಸ್ತನ್ಯಪಾನವು ಪ್ರಕೃತಿ ನೀಡಿರುವ ಮೊದಲ ಲಸಿಕೆಯಾಗಿದೆ ಎಂದು ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ ತಿಳಿಸಿದರು.**

ಆರೋಗ್ಯ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಜಂಟಿ ಸಹಯೋಗದೊಂದಿಗೆ ನಗರದ ಬಡಮಕಾನ್ ಅಂಗನವಾಡಿ ಕೇಂದ್ರದಲ್ಲಿ ಆಯೋಜಿಸಲಾಗಿದ್ದ 'ವಿಶ್ವ ಸ್ತನ್ಯಪಾನ ಸಪ್ತಾಹ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪ್ರತಿವರ್ಷ ಆಗಸ್ಟ್ 1 ರಿಂದ 7 ರವರೆಗೆ ವಿಶ್ವ ಸ್ತನ್ಯಪಾನ ಸಪ್ತಾಹವನ್ನು ಆಚರಿಸಲಾಗುತ್ತಿದ್ದು, ತಾಯಂದಿರಿಗೆ ಸ್ತನ್ಯಪಾನದ ಮಹತ್ವದ ಕು-



ರಿತು ಜಾಗೃತಿ ಮೂಡಿಸಲಾಗುತ್ತಿದೆ. ನವಜಾತ ಶಿಶುವಿಗೆ ಜೇನುತುಪ್ಪ ಅಥವಾ ಸಕ್ಕರೆ ನೀರನ್ನು ನೀಡಬಾರದು. ಮಗು ಜನಿಸಿದ ತಕ್ಷಣ ಬರುವ ಗಿಣ್ಣುಹಾಲು ಅಮೃತಕ್ಕೆ ಸಮಾನವಾಗಿದ್ದು, ಅದು ಮಗುವಿಗೆ ಜೀವನಪರ್ಯಂತ ರೋಗನಿರೋಧಕ ಶಕ್ತಿಯನ್ನು ನೀಡುತ್ತದೆ ಎಂದು ಹೇಳಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ. ಜಾನಕಿ ಮಾತನಾಡಿ, ಯಾವುದೇ ಮೂಢನಂಬಿಕೆ ಅಥ-'ವಾ ತಪ್ಪು ತಿಳುವಳಿಕೆಗಳಿಗೆ ಕಿವಿಗೊಡದೆ, ಜನಿಸಿದ ಮಗುವನ್ನು ತಾಯಿಯ ಸನಿಹದಲ್ಲೇ ಮಲಗಿಸಬೇಕು. ಇದರಿಂದ ತಾಯಿ ಮತ್ತು ಮಗುವಿನ ಬಾಂಧವ್ಯ ಹೆಚ್ಚುತ್ತದೆ. ಮಗುವಿನ ಸ್ಪರ್ಶದಿಂದ ತಾಯಿಯಲ್ಲಿ ಹಾಲಿನ ಉತ್ಪಾದನೆ ಹೆಚ್ಚಾಗುತ್ತದೆ. ಮಗು ಹಾಲು ಚೀಪಿದಾಗ ಆಕ್ಸಿಟೋಸಿನ್ ಹಾರ್ಮೋನ್ ಬಿಡುಗಡೆಯಾಗಿ ಗರ್ಭಕೋಶವು ಸಹಜ ಸ್ಥಿತಿಗೆ ಮರಳಲು ನೆರವಾಗುತ್ತದೆ ಹಾಗೂ ಬಾಣಂತಿಯರಲ್ಲಿ ರಕ್ತಸ್ರಾವ ಕಡಿಮೆಯಾಗುತ್ತದೆ ಎಂದು ತಿಳಿಸಿ, ಹಾಲು ಕುಡಿಸುವ ಸರಿಯಾದ ಭಂಗಿ ಹಾಗೂ ಹೊಂದಾಣಿಕೆಯ ಕುರಿತು ಮಾಹಿತಿ ನೀಡಿದರು.

ಆಶಾ ಮೆಂಟರ್ ತಬಿತಾ ಮಾತನಾಡಿ, ಮಗುವಿಗೆ ಆರು ತಿಂಗಳವರೆಗೆ ತಾಯಿಯ ಎದೆಹಾಲು ಹೊರತುಪಡಿಸಿ ಬೇರೇನನ್ನೂ ನೀಡಬಾರದು. ಆರು ತಿಂಗಳ ನಂತರ ಪೂರಕ ಮೃದು ಆಹಾರವನ್ನು ಪ್ರಾರಂಭಿಸಿ, ಕನಿಷ್ಠ ಎರಡು ವರ್ಷದವರೆಗೆ ಎದೆಹಾಲನ್ನು ಮುಂದುವರಿಸಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಪಿ.ಎಚ್.ಸಿ.ಓ ಭಾಗ್ಯಮ್ಮ, ವಿನ್ನಿ, ಅಂಗನವಾಡಿ ಸಹಾಯಕಿ ಮನ್ನೂರ, ಆಶಾ ಕಾರ್ಯಕರ್ತೆಯರಾದ ಕವಿತಾ, ಕೌಸರ್ ಹಾಗೂ ಗರ್ಭಿಣಿಯರು, ಬಾಣಂತಿಯರು ಮತ್ತು ತಾಯಂದಿರು ಉಪಸ್ಥಿತರಿದ್ದರು.

AJATHA SHATHRU KANNADA DAILY MORNING Editor, Printer, Publisher, & Owned by : PRADEEP KUMAR H.No. 2/77/1, Godi nilaya, Halli street, 1st ward,Mainahalli, Koppal-583238, Dist : Koppal- Karnataka Printed at : Goditechnologies, H.No. 2/77/1, Godi nilaya, Halli street, 1st ward,Mainahalli, Koppal-583238, Karnataka